RNI: KARKAN\2019\78042



ಸಂಪಾದಕರು : ಸಿ.ಎನ್.ಸಮಗಂಡಿ.

# ಸತ್ಯಮಿಥ್ಯ

ನಿಮ್ಮ ಪ್ರತಿಬಿಂಬ ಕನ್ನಡ ದಿನ ಪತ್ರಿಕೆ

ಚನ್ನು ಮೆನ್ಸ್‌ವೇರ್
ಕೊಳ್ಳಿಯವರ ಕ್ರಾಸ್.
ಚನ್ನು ಸ್ಟೀಚ್‌ವರ್ಲ್ಡ್
ಬಿ.ಎಸ್.ಎನ್.ಎಲ್. ಆಫೀಸ್ ಹತ್ತಿರ.
ಜೇಂಟ್ಸ್ ಸ್ಪೇಷಲಿಷ್ಟ ಟೇಲರ್
ಗಜೇಂದ್ರಗಡ-582114.
ಸೆಲ್ : 9986982482, 9686165708

Satyamithi Kannada Daily Morning

ಎಸ್.ವಿ. ಸಂಕನೂರ ಪರ ಶ್ರಮಿಸಲು ಮಾಜಿ ಸಚಿವ ಕಳಕಪ್ಪ ಬಂಡಿ ಕರೆ » 2

ಮೇ 15 ರೊಳಗೆ ಕೆರೆ ತುಂಬಿಸಲು ಗಡುವು » 3

ಕಾಲ ಬದಲಾದರೂ ಗುರುಭಕ್ತಿ ಅಚಲ; 55 ವರ್ಷಗಳ ಆಧ್ಯಾತ್ಮಿಕ ಪರಂಪರೆ! » 4

ಸಂಪುಟ(Volume): 1 ಸಂಚಿಕೆ (Issue): 90 ● ಪುಟ (Page): 4 ● ದರ: Rs. 4 ಮಂಗಳವಾರ 13 ಅಕ್ಟೋಬರ್ 2026 ● 13 OCTOBER 2026 ● ಧಾರವಾಡ ● ಹಾವೇರಿ ● ಗದಗ ● ಕೊಪ್ಪಳ ● ವಿಜಯನಗರ ● ರಾಯಚೂರು ● ವಿಜಯಪುರ ● ಬಾಗಲಕೋಟೆ

# ಡಿಸಿಯಾದ ತಕ್ಷಣ ಕೊಂಬು ಬರುತ್ತದೆಯೇ

## ಹಾಸನ ಜಿಲ್ಲಾಧಿಕಾರಿ ವಿರುದ್ಧ ಕೇಂದ್ರ ಸಚಿವ ಕುಮಾರಸ್ವಾಮಿ ಕಿಡಿ

**ಬೆಂಗಳೂರು:** "ಜಿಲ್ಲಾಧಿಕಾರಿಯಾದ ತಕ್ಷಣ ತಲೆಯ ಮೇಲೆ ಎರಡು ಕೊಂಬು ಇದೆಯಾ? ಸ್ವಲ್ಪ ಎಚ್ಚರಿಕೆ ಇರಲಿ ಎಂದು ಹಾಸನ ಜಿಲ್ಲಾಧಿಕಾರಿಗಳ ವಿರುದ್ಧ ಕೇಂದ್ರ ಸಚಿವ ಎಚ್‌ಡಿ ಕುಮಾರಸ್ವಾಮಿ ಕಿಡಿಕಾರಿದ್ದಾರೆ.

ಇತ್ತೀಚೆಗೆ ಗಣೇಶೋತ್ಸವ ವಿಚಾರವಾಗಿ ಹಾಸನ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಜಿಲ್ಲಾಧಿಕಾರಿಯಾದ ಕೆ. ಎಸ್. ಲತಾಕುಮಾರಿಯವರು ನೋಟಿಸ್ ಜಾರಿ ಮಾಡಿದ್ದರು. ಈ ವಿಷಯ ಸಾಕಷ್ಟು ಚರ್ಚೆಗೆ ಗ್ರಾಸವಾಗಿತ್ತು. ಸದ್ಯ ಕೇಂದ್ರ ಸಚಿವರು ಪ್ರತಿಕ್ರಿಯೆ ನೀಡಿದ್ದಾರೆ.

**ಜಿಲ್ಲಾಧಿಕಾರಿ ಏನು ಪಾಳೆಗಾರರಾ?:** "ನಾನು ಸುಮ್ಮನೆ ಮಾತಾಡೋದಿಲ್ಲ. ಎಸ್ಪಿಗೆ ನೋಟಿಸ್ ಕೊಡುತ್ತಾರೆ ಎಂದ-ರೆ ಏನರ್ಥ? ಎಸ್ಪಿ ಕೂಡ ಹೆಣ್ಮಗಳು. ಜಿಲ್ಲಾಧಿಕಾರಿ ಏನು ಪಾಳೆಗಾರರಾ? ಪರಿಮಿತಿಯಲ್ಲಿ ಕೆಲಸ ಮಾಡಬೇಕು ಅಷ್ಟೆ," ಎಂದು ಹಾಸನ ಜಿಲ್ಲೆ ವಿದ್ಯಮಾನದ ವಿಚಾರವಾಗಿ ಕೇಂದ್ರ ಸಚಿವ ಎಚ್‌ಡಿ ಕುಮಾರಸ್ವಾಮಿ ಎಚ್ಚರಿಸಿದ್ದಾರೆ.

**ಏನು ನಡೀತಾ ಇದೆ ಕರ್ನಾಟಕದಲ್ಲಿ?:** "ಎಲ್ಲಿ ಕೆಲಸ ಮಾಡುತ್ತಿದ್ದೀರಿ? ಅಧಿಕಾರ ನಡೆಸಬೇಕಾದರೆ ದುರಹಂಕಾರದಲ್ಲಿ ಏನು ಮಾಡುತ್ತಿದ್ದೇನೆ ಅನ್ನೋದು ಗೊತ್ತಾಗಬೇಕು ಮೊದಲು. ಅದನ್ನೆ ನಾನು ಹೇಳಿದ್ದೇನೆ. ಪೋಸ್ಟ್ ಮಾಡೋದು, ಸ್ಟೇಟಸ್ ಹಾಕೋದು ಅಂದರೆ ಏನು? ಯಾರು ಆ ಡಿಸಿಗೆ ಪೋಸ್ಟ್ ಮಾಡೋದಕ್ಕೆ ಅವಕಾಶ ಕೊಟ್ಟಿದ್ದು? ಸಾರ್ವಜನಿಕವಾಗಿ ಯಾರಾದರೂ ಮಾತನಾಡಿದರೆ ಮುಖ್ಯ ಕಾರ್ಯದರ್ಶಿಗೆ ಪತ್ರ ಬರೆಯಬೇಕು. ಅಷ್ಟು ಪರಿಜ್ಞಾನ ಇಲ್ಲವಾ



ಈ ಜಿಲ್ಲಾಧಿಕಾರಿಗೆ? ಏನು ಪೋಸ್ಟ್ ಮಾಡ್ತಾರೆ? ಏನು ನಡೀತಾ ಇದೆ ಕರ್ನಾಟಕದಲ್ಲಿ? ಈ ಅಧಿಕಾರಿ ಕೆಪಿಎಸ್ಸಿ ಕಾರ್ಯದರ್ಶಿ ಆಗಿದ್ದಾಗ ಏನು ಮಾಡಿದ್ದರು ಎನ್ನುವುದು ಗೊತ್ತಾ? ಅವರ ಹಣೆಬರಹ ಏನು ಎನ್ನುವುದು ಗೊತ್ತಾಗುತ್ತದೆ. ಅವರನ್ನು ರಜೆಯ ಮೇಲೆ ಕಳಿಸಿ ಸಂಸ್ಪೆಂಡ್ ಮಾಡಬೇಕಿತ್ತು. ಅದು ಬಿಟ್ಟು ಹಾಸನ ಜಿಲ್ಲಾಧಿಕಾರಿ ಹುದ್ದೆಯಲ್ಲಿ ತಂದು ಕೂರಿಸಿದ್ದಾರೆ," ಎಂದು ಕಿಡಿ ಕಾರಿದರು.

### ಕರೆದುಕೊಂಡು ಬಂದು ರಕ್ಷಣೆ

**ಹಾಸನ ಜಿಲ್ಲಾಧಿಕಾರಿ ಆ ಹೆಣ್ಣುಮಗಳು ಕೆಪಿಎಸ್‌ಸಿಯಲ್ಲಿಏನು ಮಾಡಿದ್ದರು ಅವರನ್ನು ಅಮಾನತು ಮಾಡಬೇಕಿತ್ತು ಆದರೆ ಇಲ್ಲಿ ಕರೆದುಕೊಂಡು ಬಂದು ರಕ್ಷಣೆ ಕೊಟ್ಟು ಇಟ್ಟುಕೊಂಡಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಹಾಸನದ ದೇವಿಗೆರೆಯಲ್ಲಿ ಹಲವಾರು ಗಣಪತಿಗಳನ್ನು ಬಿಟ್ಟಿದ್ದಾ-ರೆ ಎಸ್‌ಪಿಗೆ ನೋಟೀಸ್ ಕೊಡುತ್ತಾರೆ ಎಂದರೆ ಎಸ್‌ಪಿಗೆ ಜವಾಬ್ದಾರಿ ಇಲ್ಲವೇ ಎಂದು ಪ್ರಶ್ನಿಸಿದರು. ಐಪಿಎಸ್ ಅಧಿಕಾರಿಗೆ ನೊಟೀಸ್ ಕೊಡುತ್ತಾರೆ ಹೀಗಾದರೆ ಈ ಜಿಲ್ಲೆಯಲ್ಲಿಆಡಳಿತ ಹೇಗೆ ನಡೆಸುತ್ತಾರೆ? ಜ್ಞಾನ ಇಟ್ಟುಕೊಂಡು ಕೆಲಸ ಮಾಡಬೇಕು, ಇಲ್ಲವಾದಲ್ಲಿ ಆಡಳಿತ ಕೊಲ್ಯಾಪ್ಸ್ ಆಗುತ್ತೆ ಎಂದು ಎಚ್‌ಡಿಕೆ ಬೇಸರ ವ್ಯಕ್ತಪಡಿಸಿದರು.**

## ಡಾ. ಸುಧಾ ಯಾದವ್ ಕರ್ನಾಟಕದ ನೂತನ ರಾಜ್ಯಪಾಲರಾಗಿ ನೇಮಕ

**ದೆಹಲಿ :** ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಕರ್ನಾಟಕ ಸೇರಿ ವಿವಿಧ 6 ರಾಜ್ಯಗಳಿಗೆ ಹೊಸ ರಾಜ್ಯಪಾಲರನ್ನು ನೇಮಕ ಮಾಡಿದ್ದಾರೆ.



ಡಾ. ಸುಧಾ ಯಾದವ್ ಅವರನ್ನು ಕರ್ನಾಟಕದ ನೂತನ ರಾಜ್ಯಪಾಲರನ್ನಾಗಿ ನೇಮಕಮಾಡಲಾಗಿದೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ವಿವಿಧ 6 ರಾಜ್ಯಗಳಿಗೆ ಹೊಸರಾಜ್ಯಪಾಲರನ್ನು ನೇಮಕ ಮಾಡಿ ಆದೇಶಿಸಿದ್ದಾರೆ.

ಬಿಜೆಪಿಯ ಹಿರಿಯ ನಾಯಕಿ ಮತ್ತು ಸಂಸದೀಯ ಮಂಡಳಿಯ ಸದಸ್ಯೆಯಾಗಿರುವ ಡಾ. ಸುಧಾ ಯಾದವ್ ಅವರಿಗೆ ಕರ್ನಾಟಕದ ರಾಜ್ಯಪಾಲರ ಜವಾಬ್ದಾರಿ ವಹಿಸಲಾಗಿದೆ.

## ಗದಗ ಜಿಲ್ಲಾ ಸೈಬರ್ ಕ್ರೈಂನಲ್ಲಿದ್ದ ಪಿಎಸ್‌ಐ ಪ್ರವೀಣ ಗರೇಬಾಳ ಗಜೇಂದ್ರಗಡ ಠಾಣೆಯ ಪಿಎಸ್‌ಐ

**ಸತ್ಯಮಿಥ್ಯ ಸುದ್ದಿಮೂಲ ಗಜೇಂದ್ರಗಡ :**
ಗಜೇಂದ್ರಗಡ ಪೋಲಿಸ್ ಠಾಣೆಯ ನೂತನ ಪಿ.ಎಸ್.ಐ. ಆಗಿ ಪ್ರವೀಣ



ಗರೇಬಾಳ ಅಧಿಕಾರವನ್ನು ರವಿವಾರ ಸ್ವೀಕಾರ ಮಾಡಿದರು. ಠಾಣೆ-ಯ ಸಿಬ್ಬಂದಿಗಳಿಂದ ಹೂ ಗುಚ್ಛ ನೀಡುವ ಮೂಲಕ ಸಿಬ್ಬಂದಿಗಳು ಸ್ವಾಗತಿಸಿದರು. ಪ್ರಸ್ತುತ ಪಿ.ಎಸ್.ಐ. ಅವರು ಗಡಿಭಾಗದಲ್ಲಿನ ಚಡಚಣ, ಕೊರ್ತಿ ಕೋಲಾರ ಹಾಗೂ ಗದಗ ಜಿಲ್ಲಾ ಸೈಬರ್ ಕ್ರೈಂ ಠಾಣೆಯಲ್ಲಿ ಕಾರ್ಯ ನಿರ್ವಹಿಸಿದ ಅನುಭವ ಹೊಂದಿದ ಇವರು, ಪ್ರಸ್ತುತ ಗಜೇಂದ್ರಗಡ ಪೋಲಿಸ ಠಾಣೆಯ ಪಿ.ಎಸ್.ಐ. ಆಗಿ ಅಧಿಕಾರ ಸ್ವೀಕರಿದ್ದಾರೆ.

## ಸಾಲಬಾಧೆ ತಾಳಲಾರದೆ ಲಕ್ಕಲಕಟ್ಟಿಯ ರೈತ ಸಾವು

**ಸತ್ಯಮಿಥ್ಯ ಸುದ್ದಿಮೂಲ ಗಜೇಂದ್ರಗಡ :**
ತಾಲ್ಲೂಕಿನ ಸಮೀಪದ ಲಕ್ಕಲಕಟ್ಟಿ ಗ್ರಾಮದ 53 ವರ್ಷದ ರೈತ ಸಂಗಯ್ಯ ಕಳಕಯ್ಯ ಹಿರೇಮಠ ಅವರು ಸಾಲದ ಬಾಧೆಯಿಂದ ಮೃತಪಟ್ಟಿದ್ದಾರೆ ಎಂದು ತಿಳಿದುಬಂದಿದೆ.



***ಬರಗಾಲದಿಂದ ಬೆಳೆ ನಷ್ಟ; 15 ರಿಂದ 20 ಲಕ್ಷಕ್ಕೂ ಅಧಿಕ ಸಾಲದ ಹೊರೆ**
***ಕುಟುಂಬ ನಿರ್ವಹಣೆಯ ಸಂಕಷ್ಟ**

ಕಳೆದ ಎರಡು ವರ್ಷಗಳಿಂದ ಮಳೆ ಕೊರತೆಯಿಂದಾಗಿ ಬೆಳೆ ನಷ್ಟ ಅನುಭವಿಸಿದ್ದ ರೈತ ಸಂಗಯ್ಯ ಅವರು ಕುಟುಂಬ ನಿರ್ವಹಣೆಗಾಗಿ ವಿವಿಧ ಖಾಸಗಿ ಬ್ಯಾಂಕ್‌ಗಳು ಹಾಗೂ ಸೊಸೈಟಿಗಳಿಂದ ಸಾಲ ಪಡೆದಿದ್ದರು. ಸುಮಾರು 15 ರಿಂದ 20 ಲಕ್ಷಕ್ಕೂ ಅಧಿಕ ಸಾಲವಾಗಿದ್ದು, ಅದನ್ನು ಮರುಪಾವತಿಸಲು ಸಾಧ್ಯವಾಗದೆ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದರು ಎನ್ನಲಾಗಿದೆ.

ಪ್ರಗತಿಪರ ಕೃಷಿ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿದ್ದ ಅವರು, ಬರಗಾಲದ ಹಿನ್ನೆಲೆಯಲ್ಲಿ ಕೃಷಿಯಿಂದ ನಿರೀಕ್ಷಿತ ಆದಾಯ ದೊರೆಯದ ಕಾರಣ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ (ನರೇಗಾ) ಕೂಲಿ ಕೆಲಸವನ್ನೂ ಮಾಡುತ್ತಿದ್ದರು. ಆದರೆ, ಕೂಲಿ ಕೆಲಸದಿಂದ ದೊರೆ-ಯುತ್ತಿದ್ದ ಆದಾಯ ಕುಟುಂಬದ ಅಗತ್ಯಗಳನ್ನು ಪೂರೈಸಲು ಸಾಕಾಗುತ್ತಿರಲಿಲ್ಲ ಎನ್ನಲಾಗಿದೆ.

ಐವರು ಮಕ್ಕಳಾದ ನಾಲ್ವರು ಹೆಣ್ಣುಮಕ್ಕಳು ಹಾಗೂ ಒಬ್ಬ ಗಂಡು ಮಗನ ಕುಟುಂಬದ ಜವಾಬ್ದಾರಿ ಅವರ ಮೇಲಿತ್ತು. ಮಕ್ಕಳ ಭವಿಷ್ಯ ಹಾಗೂ ಕುಟುಂಬ ನಿರ್ವಹಣೆಯ ಚಿಂತೆ, ಮತ್ತೊಂದೆಡೆ ಹೆಚ್ಚುತ್ತಿರುವ ಸಾಲದ ಹೊರೆ ಅವರ ಕುಟುಂಬವನ್ನು ಸಂಕಷ್ಟಕ್ಕೆ ದೂಡಿತ್ತು ಎಂದು ತಿಳಿದುಬಂದಿದೆ.

ಈ ಹಿನ್ನೆಲೆಯಲ್ಲಿ ಸಂಗಯ್ಯ ಅವರು ವಿಷ ಸೇವಿಸಿದ್ದು, ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ ಎಂದು ತಿಳಿದುಬಂದಿದೆ. ಘಟನೆಯಿಂದ ಲಕ್ಕಲಕಟ್ಟಿ ಗ್ರಾಮದಲ್ಲಿ ದುಃಖದ ವಾತಾವರಣ ನಿರ್ಮಾಣವಾಗಿದೆ.

ಬರಗಾಲ, ಬೆಳೆ ನಷ್ಟ ಮತ್ತು ಸಾಲದ ಹೊರೆ ರೈತ ಕುಟುಂಬಗಳ ಬದುಕನ್ನು ಸಂಕಷ್ಟಕ್ಕೆ ತಳ್ಳುತ್ತಿರುವ ಹಿನ್ನೆಲೆಯಲ್ಲಿ, ಸಂಕಷ್ಟದಲ್ಲಿರುವ ರೈತರಿಗೆ ಸೂಕ್ತ ನೆರವು ಹಾಗೂ ಪರಿಹಾರ ಒದಗಿಸುವಂತೆ ಗ್ರಾಮಸ್ಥರು ಮತ್ತು ರೈತರು ಆಗ್ರಹಿಸಿದ್ದಾರೆ.

## ಅತ್ಯಾಚಾರ ಆರೋಪ, ಹುಣಸಮಾರನಹಳ್ಳಿ ಮಠದ ನಂಜೇಶ್ವರ ಸ್ವಾಮೀಜಿ ಅಂದರ್

**ಬೆಂಗಳೂರು:** ಯುವತಿಯೊಬ್ಬರ ಮೇಲೆ ಅತ್ಯಾಚಾರ ಎಸಗಿದ ಆರೋಪದ ಮೇಲೆ ಬೆಂಗಳೂರಿನ ಹುಣಸಮಾರನಹಳ್ಳಿ ಮಠದ ದಯಾನಂದ ಅಲಿಯಾಸ್ ನಂಜೇಶ್ವರ ಶಿವಾಚಾರ್ಯ ಸ್ವಾಮೀಜಿಯನ್ನು ಪೊಲೀಸರು ಸೋಮವಾರ ಬಂಧಿಸಿದ್ದಾರೆ.



ಯುವತಿ ನೀಡಿದ ದೂರಿನ ಆಧಾರದ ಮೇಲೆ ಎಫ್‌ಐಆರ್ ದಾಖಲಿಸಿಕೊಂಡ ಬೆಂಗಳೂರಿನ ಈಶಾನ್ಯ ವಿಭಾಗದ ಮಹಿಳಾ ಪೊಲೀಸ್ ಠಾಣೆಯ ಅಧಿಕಾರಿಗಳು, ತಕ್ಷಣವೇ ಆರೋಪಿ ಸ್ವಾಮೀಜಿಯನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ.

ಬಂಧಿತ ನಂಜೇಶ್ವರ ಶಿವಾಚಾರ್ಯ ಸ್ವಾಮೀಜಿಯನ್ನು ನೇರವಾಗಿ ಪೊಲೀಸ್ ಠಾಣೆಗೆ ಕರೆತರಲಾಗಿದ್ದು, ಖಾಕಿ ಪಡೆಯು ಈ ಕುರಿತು ಕಟ್ಟುನಿಟ್ಟಿನ ವಿಚಾರಣೆ ಮತ್ತು ತನಿಖಾ ಪ್ರಕ್ರಿಯೆಯನ್ನು ತೀವ್ರಗೊಳಿಸಿದೆ.

ಯುವತಿಯನ್ನು ಮದುವೆಯಾಗುವುದಾಗಿ ನಂಬಿಸಿ, ಅತ್ಯಾಚಾರ ಎಸಗಿದ ಹಾಗೂ ವಂಚಿಸಿದ ಆರೋಪ ಸ್ವಾಮೀಜಿ ವಿರುದ್ಧ ಕೇಳಿಬಂದಿದೆ.

ನೂರಾರು ಕೋಟಿ ಜಮೀನು ಮಾಲೀಕತ್ವ ಹೊಂದಿರುವ ವೀರಶೈವ ಸಮುದಾಯದ ಹುಣಸಮಾರನಹಳ್ಳಿ ಮಠವು ವೀರಶೈವ ಲಿಂಗಾಯತ ಸಮುದಾಯದ ಪಂಚಪೀಠಗಳಲ್ಲಿ ಒಂದಾದ ಶ್ರೀಶೈಲ ಮಠದ ಶಾಖಾ ಮಠವಾಗಿದೆ. ಇದಕ್ಕೂ ಮೊದಲು, ಅಂದರೆ 2017ರ ಅಕ್ಟೋಬರ್‌ನಲ್ಲೂ ಸಹ ಸ್ವಾಮೀಜಿಯವರ ವಿರುದ್ಧ ಇದೇ ರೀತಿಯಾಗಿ ಮಹಿಳೆಯರೊಂದಿಗೆ ಅಕ್ರಮ ಸಂಬಂಧ ಹಾಗೂ ದೈಹಿಕ ಸಂಪರ್ಕದ ಆರೋಪಗಳು ಕೇಳಿಬಂದಿದ್ದು, ಆ ಸಂದರ್ಭದಲ್ಲಿ ಗ್ರಾಮಸ್ಥರು ಮತ್ತು ಭಕ್ತರು ಮಠದ ಮುಂದೆ ಪ್ರತಿಭಟನೆ ನಡೆಸಿ ಅವರನ್ನು ಕೆಳಗಿಳಿಸುವಂತೆ ಆಗ್ರಹಿಸಿದ್ದರು. ನಂಜೇಶ್ವರ ಶಿವಾಚಾರ್ಯ ಸ್ವಾಮೀಜಿ ಅವರ ಮೇಲಿನ ವಿವಾದಗಳ ಹಿನ್ನೆಲೆ ನೋಡುವುದಾದರೆ, ಇದು ಮೊದಲ ಬಾರಿಗೆ ಕೇಳಿಬಂದಿರುವ ಆರೋಪವಲ್ಲ. ಬೆಂಗಳೂರಿನ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಸಮೀಪವಿರುವ ಹುಣಸಮಾರನಹಳ್ಳಿ ಮಠವು ಸುಮಾರು 1500ಕ್ಕೂ ಅಧಿಕ ಎಕರೆ ಅತ್ಯಮೂಲ್ಯ ಜಮೀನನ್ನು ಹೊಂದಿರುವ ಅತ್ಯಂತ ಶ್ರೀಮಂತ ಮಠಗಳಲ್ಲಿ ಒಂದಾಗಿದ್ದು, ಇದರ ಆಸ್ತಿ ಹಾಗೂ ಜಮೀನಿಗೆ ಸಂಬಂಧಿಸಿದ ವಿವಾದಗಳು ಆಗಾಗ್ಗೆ ಮುನ್ನೆಲೆಗೆ ಬರುತ್ತಿರುತ್ತವೆ.

## 106 ಕ್ವಿಂಟಾಲ್ ಪಡಿತರ ಅಕ್ಕಿ ವಶ

**ಹೊಸಪೇಟೆ:** ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಅಧಿಕಾರಿಗಳು ವಿಜಯನಗರ ಜಿಲ್ಲೆಯಲ್ಲಿ ಭರ್ಜರಿ ಕಾರ್ಯಾಚರಣೆ ನಡೆಸಿದ್ದು, ಅಕ್ರಮವಾಗಿ ಸಾಗಿಸಲಾಗುತ್ತಿದ್ದ ಲಕ್ಷಾಂತರ ರೂಪಾಯಿ ಮೌಲ್ಯದ ಪಡಿತರ (ಪಿಡಿಎಸ್) ಅಕ್ಕಿಯನ್ನು ವಶಪಡಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ.



ವಿಜಯನಗರ ಜಿಲ್ಲೆಯ ಹೂವಿನಹಡಗಲಿ ತಾಲೂಕಿನ ಹಿರೇಹಡಗಲಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ದಾಳಿ ನಡೆದಿದೆ. ನಿಯಮಬಾಹಿರವಾಗಿ ಸಾಗಣೆಯಾಗುತ್ತಿದ್ದ ಸುಮಾರು ರೂ.2,38,500 ಮೌಲ್ಯದ 106 ಕ್ವಿಂಟಾಲ್ ಪಡಿತರ ಅಕ್ಕಿಯನ್ನು ಅಧಿಕಾರಿಗಳು ಜಪ್ತಿ ಮಾಡಿದ್ದಾರೆ.

ಕೆಎ-25 ಎಬಿ 1751 ನೋಂದಣಿ ಸಂಖ್ಯೆಯ ವಾಹನದಲ್ಲಿ ಅಕ್ಕಿಯನ್ನು ಸಾಗಿಸಲಾಗುತ್ತಿತ್ತು. ಪರಿಶೀಲನೆ ವೇಳೆ ಅಧಿಕಾರಿಗಳು ಸಂಪೂರ್ಣ ಅಕ್ಕಿ ದಾಸ್ತಾನಿನ ಜೊತೆಗೆ ಸಾಗಾಟಕ್ಕೆ ಬಳಸಿದ ವಾಹನವನ್ನು ವಶಕ್ಕೆ ಪಡೆದು, ಮುಂದಿನ ಕಾನೂನು ಕ್ರಮಕ್ಕಾಗಿ ಕ್ರಮ ಕೈಗೊಂಡಿದ್ದಾರೆ. ಈ ಸಂಬಂಧ ಹೂವಿನಹಡಗಲಿ ತಾಲ್ಲೂಕಿನ ಆಹಾರ ನಿರೀಕ್ಷಕ ನವೀನ್ ಕುಮಾರ್ ಅವರು ಹಿರೇಹಡಗಲಿ ಪೊಲೀಸ್ ಠಾಣೆಗೆ ದೂರು ಸಲ್ಲಿಸಿದ್ದಾರೆ.

ಅಕ್ರಮವಾಗಿ ಅಕ್ಕಿ ಸಾಗಾಟದಲ್ಲಿ ತೊಡಗಿದ್ದಾರೆ ಎನ್ನಲಾದವರ ವಿರುದ್ಧ ಕ್ರಮ ಕೈಗೊಳ್ಳುವಂತೆ ದೂರಿನಲ್ಲಿ ಮನವಿ ಮಾಡಿದ್ದಾರೆ. ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ನೀಡಿರುವ ಮಾಹಿತಿ ಹಾಗೂ ದೂರಿನ ಆಧಾರದ ಮೇಲೆ ಪೊಲೀಸರು ಮುಂದಿನ ಕ್ರಮ ಕೈಗೊಳ್ಳುವ ನಿರೀಕ್ಷೆಯಿದೆ.

ಸರ್ಕಾರದ ಸಾರ್ವಜನಿಕ ವಿತರಣಾ ವ್ಯವಸ್ಥೆಯಡಿ ಅರ್ಹ ಫಲಾನುಭವಿಗಳಿಗೆ ವಿತರಿಸಲು ಉದ್ದೇಶಿಸಿರುವ ಪಡಿತರ ಅಕ್ಕಿಯ ಅಕ್ರಮ ಸಾಗಾಟ ಮತ್ತು ದುರುಪಯೋಗ ತಡೆಯಲು ಅಧಿಕಾರಿಗಳು ಕ್ರಮ ಕೈಗೊಳ್ಳುತ್ತಿರುವ ಬೆನ್ನಲ್ಲೇ ಈ ಜಪ್ತಿ ನಡೆದಿದೆ.

ಸರ್ಕಾರದ ಆಹಾರ ಭದ್ರತಾ ಯೋಜನೆಗಳಡಿ ಫಲಾನುಭವಿಗಳಿಗೆ ತಲುಪಬೇಕಾದ ಅಕ್ಕಿಯನ್ನು ಅನುಮತಿಯಿಲ್ಲದೆ ಸಾಗಿಸುವುದು ಅಥವಾ ಬೇರೆ ಉದ್ದೇಶಗಳಿಗೆ ಬಳಸುವುದು ಸಂಬಂಧಿತ ಕಾನೂನುಗಳ ಅಡಿಯಲ್ಲಿ ಕ್ರಮಕ್ಕೆ ಕಾರಣವಾಗುತ್ತದೆ.

## ಮಹಿಳಾ ಸಂಘಟನೆ ಸಮಾಜದ ಬೆಳವಣಿಗೆಗೆ ಪೂರಕವಾಗಲಿ: ಸಂಯುಕ್ತಾ ಬಂಡಿ

**ಸತ್ಯಮಿಥ್ಯ ಸುದ್ದಿಮೂಲ ಗಜೇಂದ್ರಗಡ:**
ನಗರದ ತಳಗಲ ಪೇಟೆಯ ನೀಲಕಂಠೇಶ್ವರ ಮಠದಲ್ಲಿ ಸೋಮವಾರ ಶಿವಶಂಕರ ಶಿವಾಚಾರ್ಯ ಕುರುಹಿನಶೆಟ್ಟಿ ಮಹಿಳಾ ಟ್ರಸ್ಟ್ ಕಮಿಟಿಯ ಮಹಿಳಾ ಘಟಕದ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮ ನಡೆಯಿತು.



ಕಾರ್ಯಕ್ರಮವನ್ನು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಮಹಿಳಾ ಘಟಕದ ಕೋಶಾಧ್ಯಕ್ಷೆ ಸಂಯುಕ್ತಾ ಬಂಡಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ನೇಕಾರಿಕೆಯನ್ನು ಕೌಟುಂಬಿಕ ಆದಾಯದ ಮೂಲವಾಗಿಸಿಕೊಂಡು ಜೀವನ ನಡೆಸುತ್ತಿರುವ ಕುರುಹಿನಶೆಟ್ಟಿ ಸಮಾಜವು ತನ್ನದೇ ಆದ ವೈಶಿಷ್ಟ್ಯ ಹೊಂದಿದೆ. ಮಹಿಳಾ ಸಂಘಟನೆಗಳು ಸಮಾಜದ ಅಭಿವೃದ್ಧಿಯಲ್ಲಿ ಮಹತ್ವದ ಪಾತ್ರ ವಹಿಸಬೇಕು ಎಂದರು.

ಹಿಂದೆ ಅನೇಕ ಮಹಿಳಾ ಮಂಡಳಗಳನ್ನು ಉದ್ಘಾಟಿಸಿದ್ದು, ಅವುಗಳಲ್ಲಿ ಕೆಲವೇ ಕೆಲವು ಇಂದು ಸಕ್ರಿಯವಾಗಿವೆ. ಮಹಿಳೆಯರಲ್ಲಿ ಆತ್ಮಗೌರವ ಮತ್ತು ಸಂಘಟನಾ ಮನೋಭಾವದ ಕೊರತೆ ಉಂಟಾದಾಗ ಇಂತಹ ಪರಿಸ್ಥಿತಿ ನಿರ್ಮಾಣವಾಗುತ್ತದೆ. ಟೀಕೆ ಹಾಗೂ ನಿಂದನೆಗಳಿಗೆ ತಲೆಕೆಡಿಸಿಕೊಳ್ಳದೆ, ಅವುಗಳನ್ನು ತಮ್ಮ ಬೆಳವಣಿಗೆಗೆ ಪ್ರೇರಣೆಯಾಗಿ ಸ್ವೀಕರಿಸಬೇಕು. ಸಮಾಜದ ಅಭಿವೃದ್ಧಿಗೆ ಪೂರಕವಾದ ಕಾರ್ಯಗಳಲ್ಲಿ ಮಹಿಳೆಯರು ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಸಮಾಜದಲ್ಲಿ ಪುರುಷರಷ್ಟೇ ಮಹಿಳಾ ಸಂಘಟನೆಗಳಿಗೂ ಮಹತ್ವವಿದೆ. ಮುಂದಿನ ಪೀಳಿಗೆಗೆ ಸಮಾಜದ ಇತಿಹಾಸ, ಸಂಸ್ಕೃತಿ ಹಾಗೂ ಪರಂಪರೆಯ ಕುರಿತು ಅರಿವು ಮೂಡಿಸಿ ಗೌರವಿಸುವ ಮನೋಭಾವ ಬೆಳೆಸಬೇಕು. ಹಿಂದಿನ ಕಾಲದಲ್ಲಿ ಸಮಾಜದ ಹಿರಿಯರು ನ್ಯಾಯ-ನೀತಿ ಹಾಗೂ ಶಿಸ್ತಿಗೆ ಹೆಚ್ಚಿನ ಆದ್ಯತೆ ನೀಡುತ್ತಿದ್ದರು. ಅದೇ ರೀತಿಯಲ್ಲಿ ಸಮಾಜದ ಗೌರವ ಕಾಪಾಡುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ. ಸಮಾಜವನ್ನು ಒಗ್ಗೂಡಿಸುವ ಕೆಲಸ ಮಾಡಬೇಕೇ ಹೊರತು ಒಡೆಯುವ ಕಾರ್ಯಕ್ಕೆ ಮುಂದಾಗಬಾರದು. ಪೂರ್ವಯೋಜನೆಯೊಂದಿಗೆ ಸಂಘಟಿತವಾಗಿ ಕಾರ್ಯನಿರ್ವಹಿಸಿದರೆ ಮಹಿಳಾ ಮಂಡಳಗಳು ಇನ್ನಷ್ಟು ಬೆಳವಣಿಗೆ ಸಾಧಿಸಬಹುದು ಎಂದು ಹೇಳಿದರು.

ಮುಖ್ಯ ಅತಿಥಿ ರವೀಂದ್ರ ಕವಡಿಮಟ್ಟಿ ಮಾತನಾಡಿ, ಸಮಾಜದ ಅಭಿವೃದ್ಧಿಯಲ್ಲಿ ಮಹಿಳೆಯರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಮಹಿಳೆಯರು ಸಂಘಟಿತರಾಗಿ ಸಮಾಜದ ಏಳಿಗೆಗೆ ಶ್ರಮಿಸಬೇಕು. ಮಹಿಳಾ ಘಟಕವು ಸಮಾಜದ ಸಂಸ್ಕೃತಿ, ಸಂಪ್ರದಾಯ ಹಾಗೂ ಪರಂಪರೆಯನ್ನು ಉಳಿಸಿ ಬೆಳೆಸುವ ಜೊತೆಗೆ, ಮುಂದಿನ ಪೀಳಿಗೆಗೆ ಉತ್ತಮ ಸಂಸ್ಕಾರ ನೀಡುವ ಕಾರ್ಯದಲ್ಲಿ ತೊಡಗಿಸಿಕೊಳ್ಳಬೇಕು ಎಂದು ಹೇಳಿದರು.

ಬಳಿಕ ಮಂಜುಳಾ ರೇವಡಿ ಮಾತನಾಡಿ. ಪ್ರತಿಯೊಬ್ಬ ಮಹಿಳೆ ತನ್ನ ಮಕ್ಕಳಿಗೆ ಉತ್ತಮ ಶಿಕ್ಷಣ, ಒಳ್ಳೆಯ ಸಂಸ್ಕಾರ ನೈತಿ-ಕತೆ ಪಾಠ ಮಾಡುವ ಮೂಲಕ ಸಂಸಾರದ ಮಾರ್ಗದರ್ಶಕಳಾಗಬೇಕು.ಸಂಸಾರದ ಎಲ್ಲ ಜವಾಬ್ದಾರಿಗಳನ್ನು ನಿಭಾಯಿಸುವ ಶಕ್ತಿ ಪ್ರತಿ ಮಹಿಳೆಯಲ್ಲಿದೆ ಅದನ್ನು ಜಾಗೃತಗೊಳಿಸುವ ಮೂಲಕ ಸಮಾಜದಲ್ಲಿ ಉತ್ತಮ ಸ್ಥಾನಮಾನ ಪಡೆದುಕೊಳ್ಳಿ ಎಂದರು.

ಇಂದಿರಾ ಕವಡಿಮಟ್ಟಿ ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಗದೀಶ ಕವಡಿಮಟ್ಟಿ ವಹಿಸಿದ್ದರು.

ಈ ಸಂದರ್ಭದಲ್ಲಿ ವಿದ್ಯಾ ಬಂಡಿ, ವನಜಾಕ್ಷಿ ಮಳಗಿ, ಇಂದಿರಾ ಕವಡಿಮಟ್ಟಿ, ಮಧು ಕವಡಿಮಟ್ಟಿ, ಶಾರದಾ ಗುಗ್ಗರಿ, ಶಶಿಕಲಾ ಓಂಕಾರಿ, ವಿಜಯಾ ಮಳಗಿ, ಹೇಮಾ ಯಡವಳ್ಳಿ, ಶಿಲ್ಪಾ ಮಾಳಗಿ, ಸುಶೀಲಾ ಕವಡಿಮಟ್ಟಿ, ಶೋಭಾ ಗಾಳಿ, ನಂದಿತಾ ಉರವಕೊಂಡ, ಬಸಮ್ಮ ನಿಲೋಗಲ್ಲ, ವೇದಾ ಕವಡಿಮಟ್ಟಿ, ಕಸ್ತೂರೆವ್ವ ಬಳೂಟಗಿ, ಜ್ಯೋತಿ ಚವಡಿ, ಶಕುಂತಲಾ ಮರದಡ್ಡಿ, ಅಂಜನಾದೇವಿ ಕವಡಿಮಟ್ಟಿ, ಹೇಮಾ ಪುರ್ತಗೇರಿ, ಗೀತಾ ಕವಡಿಮಟ್ಟಿ, ಕಸ್ತೂರಿ ಶಿಗ್ಗಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಸತ್ಯ ಮಿಥ್ಯ
ನಿಮ್ಮ ಪ್ರತಿಬಿಂಬ ಕನ್ನಡ ದಿನ ಪತ್ರಿಕೆ
SATYA MITHI
Kannada Daily Morning

## ಕ್ರೀಡಾ ಸಾಧನೆಗೆ ಶಿಕ್ಷಕ ರಾಜು ನಾರಾಯಣ ವಾಘಮೊರೆಗೆ ರಾಜ್ಯಮಟ್ಟದ ಶಿಕ್ಷಕರತ್ನ ರಾಷ್ಟ್ರ ಪ್ರಶಸ್ತಿ

**ಸತ್ಯಮಿಥ್ಯ ಸುದ್ದಿಮೂಲ ದೇವಲಗಾಣಗಾಪುರ:**
ಕ್ರೀಡಾ ಕ್ಷೇತ್ರದಲ್ಲಿ ಸಲ್ಲಿಸಿದ ಗಣನೀಯ ಸೇವೆ ಹಾಗೂ ಸಾಧನೆಯನ್ನು ಗುರುತಿಸಿ, ಅಫಜಲಪುರ ತಾಲೂಕಿನ ದೇವಲ ಗಾಣಗಾಪುರದ ಶಿಕ್ಷಕ ರಾಜು ನಾರಾಯಣ ವಾಘಮೊರೆ ಅವರಿಗೆ ರಾಜ್ಯಮಟ್ಟದ ಶಿಕ್ಷಕರತ್ನ ರಾಷ್ಟ್ರ ಪ್ರಶಸ್ತಿ ನೀಡಿ ಗೌರವಿಸಲಾಗಿದೆ.

ಕಾವ್ಯಶ್ರೀ ಚಾರಿಟೇಬಲ್ ಟ್ರಸ್ಟ್ ಹಾಗೂ ಚೇತನ ಫೌಂಡೇಶನ್ ವತಿಯಿಂದ ಬೆಂಗಳೂರಿನ ಕನ್ನಡ ಸಾಹಿತ್ಯ ಪರಿಷತ್ತಿನ ಸಭಾಂಗಣದಲ್ಲಿ ರಾಜ್ಯದ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಸಾಧಕರಿಗೆ ಪ್ರಶಸ್ತಿ ಪ್ರದಾನ ಸಮಾರಂಭ ಆಯೋಜಿಸಲಾಗಿತ್ತು. ಈ ಸಮಾರಂಭದಲ್ಲಿ ಉತ್ತರ ಕರ್ನಾಟಕ ಭಾಗದ ಸಾಧಕರಾದ ರಾಜು ನಾರಾಯಣ ವಾಘಮೊರೆ ಅವರ ಕ್ರೀಡಾ ಕ್ಷೇತ್ರದ ಸಾಧನೆಯನ್ನು ಗುರುತಿಸಿ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಇದೇ ಸಂದರ್ಭದಲ್ಲಿ ಹಿರಿಯ ಶಿಕ್ಷಕರಾದ ರಂಗರಾವ ಖೇಡಗೀಕರ, ಶ್ರೀ ಗಂಗಾಪರಮೇಶ್ವರಿ ಶಾಲೆಯ ಸಿಬ್ಬಂದಿ, ದೇವಲ ಗಾಣಗಾಪುರದ ಯತಿರಾಜ ಶಾಲೆಯ ಕನ್ನಡ ಹಾಗೂ ಆಂಗ್ಲ ಮಾಧ್ಯಮ ವಿಭಾಗಗಳ ಮುಖ್ಯಗುರುಗಳಾದ ಬಸವರಾಜ ಹಡಪದ, ಅಮೃತ ನೀರಗುಡಿ, ಕಾಲೇಜಿನ ಉಪನ್ಯಾಸಕ ವಿಕಾಸ್ ಪಾಂಚಾಳ ಹಾಗೂ ಸ್ನೇಹಿತರ ಬಳಗದವರು ರಾಜು ವಾಘಮೊರೆ ಅವರನ್ನು ಸನ್ಮಾನಿಸಿ ಅಭಿನಂದಿಸಿದರು.

ರಾಜು ನಾರಾಯಣ ವಾಘಮೊರೆ ಅವರಿಗೆ ದೊರೆತ ಈ ಗೌರವಕ್ಕೆ ಸ್ಥಳೀಯ ಶೈಕ್ಷಣಿಕ ಹಾಗೂ ಕ್ರೀಡಾ ವಲಯದಲ್ಲಿ ಸಂತಸ ವ್ಯಕ್ತವಾಗಿದೆ.



## ರಬಕವಿಯಲ್ಲಿ ಶ್ರೀ ದುರ್ಗಾದೇವಿ ಮೂರ್ತಿ ಮೆರವಣಿಗೆ

**ಬಾಗಲಕೋಟೆ:** ಜಿಲ್ಲೆಯ ರಬಕವಿ–ಬನಹಟ್ಟಿ ತಾಲ್ಲೂಕಿನ ರಬಕವಿಯ ಸಿಕ್ಕಲಗಾರ ಸಮಾಜದ ವತಿಯಿಂದ ಸತತ ಮೂರನೇ ವರ್ಷದ ಶ್ರೀ ದುರ್ಗಾದೇವಿ ಮೂರ್ತಿ ಪ್ರತಿಷ್ಠಾಪನೆ ಅಂಗವಾಗಿ ಅದ್ದೂರಿ ಮೆರವಣಿಗೆ ಜರುಗಿತು.

ರಾಮಪುರದ ಶ್ರೀ ನೀಲಕಂಠೇಶ್ವರ ಮಠದಿಂದ ರಬಕವಿಯ ಸಿಕ್ಕಲಗಾರ ಗಲ್ಲಿಯವರೆಗೆ ಶ್ರೀ ದುರ್ಗಾದೇವಿ ಮೂರ್ತಿಯನ್ನು ವಾದ್ಯಮೇಳಗಳ ಸಂಭ್ರಮ ಹಾಗೂ ಕುಂಭಮೇಳದೊಂದಿಗೆ ಭವ್ಯವಾಗಿ ಮೆರವಣಿಗೆ ಮೂಲಕ ಕರೆತರಲಾಯಿತು.

ಮೆರವಣಿಗೆಯಲ್ಲಿ ಮಹಿಳೆಯರು ಕುಂಭ ಹೊತ್ತು ಪಾಲ್ಗೊಂಡು, ಭಕ್ತಿಭಾವದಿಂದ ಶ್ರೀ ದುರ್ಗಾದೇವಿ ಮೂರ್ತಿಯನ್ನು ಬರಮಾಡಿಕೊಂಡರು.

ವಾದ್ಯಮೇಳಗಳ ಸದ್ದು, ಭಕ್ತರ ಉತ್ಸಾಹ ಹಾಗೂ ಧಾರ್ಮಿಕ ಸಂಭ್ರಮದ ನಡುವೆ ಮೆರವಣಿಗೆ ಅದ್ದೂರಿಯಾಗಿ ನೆರವೇರಿತು. ಸಿಕ್ಕಲಗಾರ ಸಮಾಜದ ಧಾರ್ಮಿಕ ಪರಂಪರೆ ಹಾಗೂ ಭಕ್ತಿ ಭಾವವನ್ನು ಪ್ರತಿಬಿಂಬಿಸುವ ಈ ಕಾರ್ಯಕ್ರಮದಲ್ಲಿ ಸಮಾಜದ ಮುಖಂಡರು, ಯುವಕರು ಹಾಗೂ ಭಕ್ತರು ಭಾಗವಹಿಸಿದರು. ಇನ್ನು ಶ್ರೀ ದುರ್ಗಾದೇವಿ ಉತ್ಸವದ ಅಂಗವಾಗಿ ಸತತ ಒಂಬತ್ತು ದಿನಗಳ ಕಾಲ ಅನ್ನಪ್ರಸಾದ ಸೇವೆಯನ್ನು ಆಯೋಜಿಸಲಾಗಿದೆ ಎಂದು ಸಿಕ್ಕಲಗಾರ ಸಮಾಜದ ಶ್ರೀ ದುರ್ಗಾದೇವಿ ಯುವಕ ಸಂಘದ ಪದಾಧಿಕಾರಿಗಳು ತಿಳಿಸಿದರು. ಒಟ್ಟಿನಲ್ಲಿ, ರಬಕವಿಯಲ್ಲಿ ಶ್ರೀ ದುರ್ಗಾದೇವಿ ಮೂರ್ತಿ ಮೆರವಣಿಗೆ ಭಕ್ತಿಭಾವ ಮತ್ತು ಧಾರ್ಮಿಕ ಸಂಭ್ರಮದೊಂದಿಗೆ ಅದ್ದೂರಿಯಾಗಿ ಜರುಗಿತು.



## ನವೇಬಾವನೂರ ಗ್ರಾಮದಲ್ಲಿ ಆರೋಗ್ಯ ತಪಾಸಣಾ ಶಿಬಿರ

**ಸತ್ಯಮಿಥ್ಯ ಸುದ್ದಿಮೂಲ ಗದಗ:**
ಜಿಲ್ಲೆಯ ಶಿರಹಟ್ಟಿ ತಾಲೂಕಿನ ನವೇಬಾವನೂರ ಗ್ರಾಮದಲ್ಲಿ ನಬಾರ್ಡ್ ವಾಲ್ಮೀಕಿ ಜನ ಅಭಿವೃದ್ಧಿ ಯೋಜನೆ, ಕೊಪ್ಪಳದ ಮಹಿಳಾ ಪರಿಸರ ಅಭಿವೃದ್ಧಿ ಸಂಸ್ಥೆ (ವೆಡ್ಸ್) ಹಾಗೂ ಗದಗ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದಲ್ಲಿ ಆರೋಗ್ಯ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿತ್ತು.

ಶಿಬಿರವನ್ನು ಗದಗ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಮಕ್ಕಳ ತಜ್ಞರು ಹಾಗೂ ಜಿಲ್ಲಾ ಸಮೀಕ್ಷಣಾಧಿಕಾರಿಗಳಾದ ಡಾ. ವೆಂಕಟೇಶ ರಾಠೋಡ್ ಅವರು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, "ಆರೋಗ್ಯವೇ ಭಾಗ್ಯ. ಆರೋಗ್ಯವನ್ನು ಕಾಪಾಡಿಕೊಳ್ಳುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ. ಅದರಲ್ಲೂ ಮಹಿಳೆಯರು ಮತ್ತು ಮಕ್ಕಳ ಆರೋಗ್ಯದ ಕಡೆಗೆ ವಿಶೇಷ ಗಮನ ಹರಿಸುವುದು ಅತ್ಯಂತ ಮುಖ್ಯ" ಎಂದು ಹೇಳಿದರು.

ಮಹಿಳೆಯರು ಅನೇಕ ಬಾರಿ ತಮ್ಮ ಆರೋಗ್ಯ ಸಮಸ್ಯೆಗಳನ್ನು ನಿರ್ಲಕ್ಷಿಸುವುದು, ಮುಜುಗರದಿಂದ ಇತರರೊಂದಿಗೆ ಹಂಚಿಕೊಳ್ಳದಿರುವುದು ಹಾಗೂ ವೈದ್ಯರನ್ನು ಸಂಪರ್ಕಿಸದೆ ಇರುವುದರಿಂದ ಸಮಸ್ಯೆಗಳು ಉಲ್ಬಣಗೊಳ್ಳುವ ಸಾಧ್ಯತೆಗಳಿವೆ. ಆದ್ದರಿಂದ ಇಂತಹ ಆರೋಗ್ಯ ತಪಾಸಣಾ ಶಿಬಿರಗಳು ರೋಗಗಳನ್ನು ಆರಂಭಿಕ ಹಂತದಲ್ಲಿಯೇ ಪತ್ತೆಹಚ್ಚಲು ಹಾಗೂ ಸೂಕ್ತ ಚಿಕಿತ್ಸೆ ಪಡೆಯಲು ಸಹಕಾರಿಯಾಗುತ್ತವೆ ಎಂದು ತಿಳಿಸಿದರು.

ಶಿಬಿರದಲ್ಲಿ ಗದಗದ ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞರಾದ ಡಾ. ಚೈತ್ರ, ಜಿಮ್ಸ್‌ನ ವೈದ್ಯರಾದ ಡಾ. ತಿಪ್ಪಣ್ಣ, ಬೆಳ್ಳಟ್ಟಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಸೂರಜ್ ಕಾಟಿಗರ್ ಹಾಗೂ ಗದಗ ಜಿಲ್ಲಾ ಎನ್‌ಸಿಡಿ ಕಾರ್ಯಕ್ರಮ ವ್ಯವಸ್ಥಾಪಕ ಡಾ. ರವಿ ಕಡಗಾವಿ ಅವರು ಗ್ರಾಮಸ್ಥರಿಗೆ ಆರೋಗ್ಯ ತಪಾಸಣೆ ನಡೆಸಿ, ವಿವಿಧ ಆರೋಗ್ಯ ಸಮಸ್ಯೆಗಳ ಕುರಿತು ಮಾಹಿತಿ ನೀಡಿದರು. ಇದೇ ವೇಳೆ ಆರೋಗ್ಯ ಸಮಸ್ಯೆಗಳನ್ನು ಗುರುತಿಸುವುದು, ರೋಗಗಳಿಂದ ರಕ್ಷಿಸಿಕೊಳ್ಳಲು ಕೈಗೊಳ್ಳಬೇಕಾದ ಮುನ್ನೆಚ್ಚರಿಕೆ ಕ್ರಮಗಳು ಹಾಗೂ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸುವ ಕುರಿತು ವೈದ್ಯರು ವಿವರವಾಗಿ ತಿಳಿಸಿದರು. ಕಾರ್ಯಕ್ರಮದಲ್ಲಿ ಪ್ರಯೋಗಾಲಯ ತಂತ್ರಜ್ಞರು, ಆಶಾ ಕಾರ್ಯಕರ್ತೆಯರು ಹಾಗೂ ವೆಡ್ಸ್ ಸಂಸ್ಥೆಯ ಸಿಬ್ಬಂದಿ ಭಾಗವಹಿಸಿದ್ದರು.

ಕಾರ್ಯಕ್ರಮದ ಪ್ರಾಸ್ತಾವಿಕ ನುಡಿ ಹಾಗೂ ನಿರೂಪಣೆಯನ್ನು ಶ್ರೀಮತಿ ಸಂಧ್ಯಾ ಕುಲಕರ್ಣಿ ಅವರು ನೆರವೇರಿಸಿದರು.




## 'ಗುಲಾಬಿ' ಚಲನಚಿತ್ರದ ಪೋಸ್ಟರ್ ಬಿಡುಗಡೆ: ಶೀಘ್ರವೇ ತೆರೆಗೆ

**ಸತ್ಯಮಿಥ್ಯ ಸುದ್ದಿಮೂಲ ತುಮಕೂರು:**
ಶ್ರೀ ಸಿದ್ಧಿವಿನಾಯಕ ಸೇವಾ ಮಂಡಳಿ, ತುಮಕೂರು ಇವರ ವತಿಯಿಂದ ಆಯೋಜಿಸಿದ್ದ 'ನಮ್ಮ ಜೇನುಗೂಡು ಬಳಗ' ನಡೆಸಿಕೊಟ್ಟ ಕಾರ್ಯಕ್ರಮದಲ್ಲಿ ಸಾವಿತ್ರಿ ರಾಮಚಂದ್ರ ಬ್ಯಾನರ್ ಅವರ 'ಗುಲಾಬಿ' ಕನ್ನಡ ಚಲನಚಿತ್ರದ ಪೋಸ್ಟರ್ ಬಿಡುಗಡೆ ಮಾಡಲಾಯಿತು.

ಅಡ್ವೋಕೇಟ್ ಡಾ. ಆರ್. ವಿಜಯಕುಮಾರ್ ನಿರ್ದೇಶಿಸಿ, ನಾಯಕರಾಗಿ ಅಭಿನಯಿಸಿರುವ ಈ ಪ್ಯಾನ್ ಇಂಡಿಯಾ ಸಿನೇಮಾ 'ಗುಲಾಬಿ' ಪೋಸ್ಟರನ್ನು ಜೇನುಗೂಡು ಬಳಗದ ಅಧ್ಯಕ್ಷ ಸೆಲ್ವಮ್ ಮತ್ತು ತಂಡದವರು ಬಿಡುಗಡೆ ಮಾಡಿದರು.

ಚಿತ್ರದ ನಾಯಕರಾದ ಹ್ಯಾಟ್ರಿಕ್ ನಿರ್ದೇಶಕ, ನಿರ್ಮಾಪಕ ಹಾಗೂ ನಟ ಡಾ. ಆರ್. ವಿಜಯಕುಮಾರ್, ನಾಯಕಿ ಅನಿತಾಶ್ರೀ, ಸಹ ನಿರ್ದೇಶಕ ವಾಸುದೇವ್ ಶೆಟ್ಟಿ ಮತ್ತು ಚಿತ್ರತಂಡದವರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಈ ಸಂದರ್ಭದಲ್ಲಿ ಡಾ. ಆರ್. ವಿಜಯಕುಮಾರ್ ಅವರನ್ನು ಗೌರವಪೂರ್ವಕವಾಗಿ ಸನ್ಮಾನಿಸಲಾಯಿತು.

ಬಳಿಕ ಮಾತನಾಡಿದ ಡಾ. ಆರ್. ವಿಜಯಕುಮಾರ್ ಅವರು, "'ಗುಲಾಬಿ' ಚಿತ್ರದ ಚಿತ್ರೀಕರಣವನ್ನು ಬೆಂಗಳೂರು ಸುತ್ತಮುತ್ತ, ತಾತಗುಣಿ, ಭೂಮಿಕಾ ಸ್ಟುಡಿಯೋ ಹಾಗೂ ಕನಕಪುರ ಸುತ್ತಮುತ್ತ ನಡೆಸಲಾಗಿದೆ. ಚಿತ್ರದಲ್ಲಿ ಆರು ಹಾಡುಗಳು ಮತ್ತು ಆರು ಸಾಹಸ ದೃಶ್ಯಗಳಿವೆ. ಈಗಾಗಲೇ ನನ್ನ 'ದೊಡ್ಡಣ್ಣ ಪುಟ್ಟಣ್ಣ', 'ರಕ್ಷಕ' ಮತ್ತು 'ರಕ್ಷಕ–2' ಮೂರು ಚಿತ್ರಗಳು ಶತದಿನೋತ್ಸವ ಆಚರಿಸಿದ್ದು, ಇದಕ್ಕೆಲ್ಲ ಪ್ರೇಕ್ಷಕರ ಪ್ರೋತ್ಸಾಹವೇ ಕಾರಣ. ಶೀಘ್ರದಲ್ಲೇ ಈ ಚಿತ್ರವನ್ನು ಬಿಡುಗಡೆ ಮಾಡಲಾಗುತ್ತದೆ" ಎಂದು ತಿಳಿಸಿದರು.




ತಾರಾಗಣ: ಡಾ. ವಿಜಯಕುಮಾರ್, ರಾಧಿಕಾ, ಚಂದನಾ, ಅನಿತಾಶ್ರೀ, ನಾಗೇಂದ್ರ ಅರಸ್, ಲಯ–ಕೋಕಿಲ, ಉಗ್ರಂ ರವಿ, ಬಿಗ್‌ಬಾಸ್ ಮಲ್ಲಮ್ಮ, ಸುರೇಂದ್ರ ಕುಮಾರ್, ಅಜಿತ್‌ಜೈನ್, ಲೋಕೇಶ್ ಮುಂತಾದವರು.

ತಾಂತ್ರಿಕ ವರ್ಗ:
ಕಥೆ, ಚಿತ್ರಕಥೆ, ಸಂಭಾಷಣೆ, ನಿರ್ದೇಶನ ಹಾಗೂ ನಿರ್ಮಾಣ: ಡಾ. ವಿಜಯಕುಮಾರ್
ಛಾಯಾಗ್ರಹಣ: ವೀರೇಶ
ಸಂಗೀತ: ಸಂತೋಷ ಜೋಶ್ವ
ಪ್ರಸಾಧನ: ನಾಗೇಶ
ಕೊರಿಯೋಗ್ರಫಿ: ಬಾಲಕೃಷ್ಣ
ಸಾಹಸ: ಗುಲಾಬಿ ಚಿನ್ನಯ್ಯ
ಸಂಕಲನ: ನಿಸಿತ್
ಪಿಆರ್‌ಓ: ಡಾ. ಪ್ರಭು ಗಂಜಿಹಾಳ, ಡಾ. ವೀರೇಶ ಹಂಡಿಗಿ
ಸಹಾಯಕ ನಿರ್ದೇಶನ: ವಾಸುದೇವ ಶೆಟ್ಟಿ ಎಚ್.ಎಸ್.
ಸಹನಿರ್ದೇಶನ: ಎಸ್. ಮೇಘರಾಜ ಗೌಡ
ನಿರ್ಮಾಣ ಉಸ್ತುವಾರಿ ಹಾಗೂ ವಸ್ತ್ರವಿನ್ಯಾಸ: ಅನಿತಾಶ್ರೀ

## ಮಾರನಬಸರಿಯಲ್ಲಿ ಎನ್‌ಎಸ್‌ಎಸ್ ಶಿಬಿರ: ಅ. 13ರಂದು ವಿಶೇಷ ಉಪನ್ಯಾಸ

**ಸತ್ಯಮಿಥ್ಯ ಸುದ್ದಿಮೂಲ ನರೇಗಲ್ಲ :**
ಪಟ್ಟಣದ ಅನ್ನದಾನೇಶ್ವರ ಪದವಿಪೂರ್ವ ಮಹಾವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಘಟಕದ ವತಿಯಿಂದ ಸಮೀಪದ ಮಾರನಬಸರಿ ಗ್ರಾಮದಲ್ಲಿ ನಡೆಯುತ್ತಿರುವ ಏಳು ದಿನಗಳ ಶಿಬಿರದ ಅಂಗವಾಗಿ ಅ. 13ರಂದು ಮಂಗಳವಾರ ಸಂಜೆ 6 ಗಂಟೆಗೆ ವಿಶೇಷ ಉಪನ್ಯಾಸ ಕಾರ್ಯಕ್ರಮ ಆಯೋಜಿಸಲಾಗಿದೆ.

**ವಿಜ್ಞಾನ, ಕೃಷಿ, ಸ್ಪರ್ಧಾತ್ಮಕ ಪರೀಕ್ಷೆ ಹಾಗೂ ಜನಪದ ಸಾಹಿತ್ಯದ ಕುರಿತು ವಿದ್ಯಾರ್ಥಿಗಳಿಗೆ ಅರಿವು ಮೂಡಿಸುವ ಕಾರ್ಯಕ್ರಮ**

ಗ್ರಾಮದ ಹಿರಿಯ ಸಂಗನಬಸಪ್ಪ ಹಾದಿಮನಿ ಅಧ್ಯಕ್ಷತೆ ವಹಿಸಲಿದ್ದು, ರೋಣದ ಸಹಾಯಕ ಕೃಷಿ ನಿರ್ದೇಶಕ ಹಾಗೂ ಮಾರನಬಸರಿ ಗ್ರಾಮ ಪಂಚಾಯಿತಿ ಆಡಳಿತಾಧಿಕಾರಿ ಬಸವರಾಜ ಮಾಳೇದ, ಹಿರಿಯರಾದ ಶೈಲಜ್ಜ ಶಾಂತಗೇರಿಮಠ, ಶಂಕ್ರಪ್ಪ ಸರ್ವಿ, ಶರಣಪ್ಪ ಅಬ್ಬಿಗೇರಿ ಹಾಗೂ ಲಕ್ಷ್ಮಣ ಪೂಜಾರ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ನರೇಗಲ್ಲದ ಗೃಹರಕ್ಷಕ ದಳದ ಅಧಿಕಾರಿ ಸುರೇಶ ಹಳ್ಳಿಕೇರಿ ಅವರು ಯುವಜನರಲ್ಲಿ ಶಿಸ್ತು, ಸೇವಾ ಮನೋಭಾವ ಹಾಗೂ ಸಾಮಾಜಿಕ ಜವಾಬ್ದಾರಿಯ ಕುರಿತು ವಿಶೇಷ ಉಪನ್ಯಾಸ ನೀಡಲಿದ್ದಾರೆ.

ಇದೇ ಸಂದರ್ಭದಲ್ಲಿ ಅನ್ನದಾನೇಶ್ವರ ಪದವಿಪೂರ್ವ ಮಹಾವಿದ್ಯಾಲಯದ ಉಪನ್ಯಾಸಕರಾದ ಡಿ.ಎಂ. ನಾಗದೇಶಿ ಅವರು 'ಆಹಾರದಲ್ಲಿ ಆಮ್ಲ ಮತ್ತು ಪ್ರತ್ಯಾಮ್ಲ', ಎ.ಎಂ. ನದಾಫ ಅವರು 'ಸಿರಿಧಾನ್ಯಗಳು ಮತ್ತು ಮಣ್ಣಿನ ಫಲವತ್ತತೆ', ಎಂ.ಬಿ. ಹಿರೇಮಠ ಅವರು 'ಯುವಕರಲ್ಲಿ ಸ್ಪರ್ಧಾತ್ಮಕ ಮನೋಭಾವನೆಗಳು', ಎಂ.ಎಸ್. ಪವಾಡೆಪ್ಪನವರ ಅವರು 'ಜನಪದ ಸಾಹಿತ್ಯ' ಹಾಗೂ ಮಂಜುನಾಥ ಎಂ. ಮೆಣಸಗಿ ಅವರು 'ಆರ್ಥಿಕ ಅಭಿವೃದ್ಧಿಯಲ್ಲಿ ಭಾರತದ ಪಾತ್ರ' ವಿಷಯಗಳ ಕುರಿತು ಉಪನ್ಯಾಸ ನೀಡಲಿದ್ದಾರೆ.

ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವ, ಕೃಷಿ ಜಾಗೃತಿ, ಸ್ಪರ್ಧಾತ್ಮಕ ಪರೀಕ್ಷೆಗಳ ಅರಿವು, ಸಾಹಿತ್ಯಾಸಕ್ತಿ ಹಾಗೂ ದೇಶದ ಆರ್ಥಿಕ ಬೆಳವಣಿಗೆಯ ಕುರಿತು ತಿಳಿವಳಿಕೆ ಮೂಡಿಸುವುದು ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ. ಪಠ್ಯಪುಸ್ತಕದ ಜ್ಞಾನದ ಜತೆಗೆ ಜೀವನಾನುಭವ, ಸಾಮಾಜಿಕ ಪ್ರಜ್ಞೆ ಮತ್ತು ಸೇವಾ ಮನೋಭಾವ ಬೆಳೆಸಿಕೊಳ್ಳಲು ಇಂತಹ ಉಪನ್ಯಾಸಗಳು ಸಹಕಾರಿಯಾಗಲಿವೆ.

## ಎಸ್.ವಿ. ಸಂಕನೂರ ಪರ ಶ್ರಮಿಸಲು ಮಾಜಿ ಸಚಿವ ಕಳಕಪ್ಪ ಬಂಡಿ ಕರೆ

**ಸತ್ಯಮಿಥ್ಯ ಸುದ್ದಿಮೂಲ ಗಜೇಂದ್ರಗಡ :**
ನಗರದ ಮಾಜಿ ಸಚಿವ ಕಳಕಪ್ಪ ಬಂಡಿ ಗೃಹ ಕಚೇರಿಯಲ್ಲಿ ಸೋಮವಾರ ಭಾರತೀಯ ಜನತಾ ಪಾರ್ಟಿ ರೋಣ ಮಂಡಲದ ವತಿಯಿಂದ ಪಶ್ಚಿಮ ಪದವೀಧರ ಕ್ಷೇತ್ರದ ಚುನಾವಣೆ ಹಿನ್ನೆಲೆಯಲ್ಲಿ ಮತದಾರರ ಮತ್ತು ಘಟನಾಯಕರ ಸಭೆಯನ್ನು ನಡೆಸಲಾಯಿತು.

ಸಭೆಯನ್ನು ಉದ್ದೇಶಿಸಿ ಮಾತನಾಡಿದ ಮಾಜಿ ಸಚಿವ ಕಳಕಪ್ಪ ಬಂಡಿ. "ಘಟನಾಯಕರು ನಿಮ್ಮ ಬೂತ್ ನ ಹಿರಿಯರ ಮಾರ್ಗದರ್ಶನದೊಂದಿಗೆ ಮೋದಿಜೀ ಅವರ ಸುಶಾಸನದ ಜನೋಪಯೋಗಿ ಕಾರ್ಯಕ್ರಮಗಳನ್ನು ಮತದಾರರಿಗೆ ಮನವರಿಕೆ ಮಾಡಿ, ಹೆಚ್ಚಿನ ಸಂಖ್ಯೆಯಲ್ಲಿ ಬಹುಮತದೊಂದಿಗೆ ನಮ್ಮ ಭಾರತೀಯ ಜನತಾ ಪಾರ್ಟಿ ಪಶ್ಚಿಮ ಪದವೀಧರ ಕ್ಷೇತ್ರದ ಅಭ್ಯರ್ಥಿಯಾದ ಎಸ್.ವಿ. ಸಂಕನೂರ ಅವರಿಗೆ ಮೊದಲ ಪ್ರಾಶಸ್ತ್ಯದ ಮತ ನೀಡಿ ಬಹುಮತದೊಂದಿಗೆ ಮತ್ತೊಮ್ಮೆ ಆಯ್ಕೆ ಮಾಡಲು ಶ್ರಮಿಸೋಣ ಎಂದು ಕರೆ ನೀಡಿದರು.

ಸಭೆಯಲ್ಲಿ ಮಂಡಲ ಅಧ್ಯಕ್ಷರಾದ ಉಮೇಶ ಮಲ್ಲಾಪುರ ಪ್ರಾಸ್ತಾವಿಕವಾಗಿ ಮಾತನಾಡಿದರು. ಧಾರವಾಡ ವಿಭಾಗ ಪ್ರಭಾರಿ ಜಯತೀರ್ಥ ಕಟ್ಟಿ ಹಾಗೂ ಜಿಲ್ಲಾಧ್ಯಕ್ಷ ರಾಜು ಕುರಡಗಿ ಸಭೆಯನ್ನು ಉದ್ದೇಶಿಸಿ ಮಾತನಾಡಿದರು.

ಈ ಸಂದರ್ಭದಲ್ಲಿ ಆರ್.ಕೆ. ಚೌಹಾನ್, ಬಾಲಾಜಿ ಬೋಸ್ಲೆ, ರಮೇಶ್ ವಕ್ಕರ್, ಭಾಸ್ಕರ ರಾಯಬಾಗಿ, ಮುದಿಯಪ್ಪ ಕರಡಿ, ರಾಜೇಂದ್ರ ಘೋರ್ಪಡೆ ಸೇರಿದಂತೆ ಪಕ್ಷದ ಹಿರಿಯ ನಾಯಕರು, ಘಟನಾಯಕರು, ಕಾರ್ಯಕರ್ತರು ಹಾಗೂ ಅನೇಕ ಮುಖಂಡರು ಮತ್ತು ಪದಾಧಿಕಾರಿಗಳು ಉಪಸ್ಥಿತರಿದ್ದರು.



## ದೇವಲ ಗಾಣಗಾಪೂರ ಜಿ.ಪಂ. ಕ್ಷೇತ್ರದ ಕಾಂಗ್ರೆಸ್ ಟಿಕೆಟ್ ಸ್ಥಳೀಯರಿಗೆ ನೀಡಿ: ಮೈಬೂಬ್ ತಾಂಬೋಳಿ ಆಗ್ರಹ

## ಸ್ಥಳೀಯರಿಗೆ ಟಿಕೆಟ್ ನೀಡದಿದ್ದರೆ ಬಂಡಾಯ ಅಭ್ಯರ್ಥಿಯಾಗಿ ಕಣಕ್ಕಿಳಿಯುವ ಎಚ್ಚರಿಕೆ

**ಸತ್ಯಮಿಥ್ಯ ಸುದ್ದಿಮೂಲ ಅಫಜಲಪುರ:**
ಜಿಲ್ಲಾ ಪಂಚಾಯತ್ ಚುನಾವಣೆ ಸಮೀಪಿಸುತ್ತಿದ್ದಂತೆ ರಾಜಕೀಯ ಚಟುವಟಿಕೆಗಳು ದಿನದಿಂದ ದಿನಕ್ಕೆ ಚುರುಕುಗೊಳ್ಳುತ್ತಿವೆ. ದೇವಲ ಗಾಣಗಾಪೂರ ಜಿಲ್ಲಾ ಪಂಚಾಯತ್ ಮತಕ್ಷೇತ್ರದ ಕಾಂಗ್ರೆಸ್ ಟಿಕೆಟ್ ಹಂಚಿಕೆ ವಿಚಾರವಾಗಿ ಸ್ಥಳೀಯರಿಗೆ ಆದ್ಯತೆ ನೀಡಬೇಕು ಎಂದು ಮೈಬೂಬ್ ತಾಂಬೋಳಿ ಅವರು ಕಾಂಗ್ರೆಸ್ ಹೈಕಮಾಂಡ್‌ಗೆ ಆಗ್ರಹಿಸಿದ್ದಾರೆ.

ದೇವಲ ಗಾಣಗಾಪೂರ ಜಿಲ್ಲಾ ಪಂಚಾಯತ್ ಮತಕ್ಷೇತ್ರವು ಒಟ್ಟು 22 ಗ್ರಾಮಗಳನ್ನು ಒಳಗೊಂಡಿದೆ. ಈ ಕ್ಷೇತ್ರದಲ್ಲಿ ಅತಿ ಹೆಚ್ಚು ಮತದಾರರನ್ನು ಹೊಂದಿರುವ ದೇವಲ ಗಾಣಗಾಪೂರದ ಸ್ಥಳೀಯರಿಗೆ. ಯಾರಿಗಾದರೂ ಕಾಂಗ್ರೆಸ್ ಪಕ್ಷದ ಟಿಕೆಟ್ ನೀಡಬೇಕು ಎಂಬುದು ಅವರ ಪ್ರಮುಖ ಒತ್ತಾಯವಾಗಿದೆ.

ಈ ಕುರಿತು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ



ಮೈಬೂಬ್ ತಾಂಬೋಳಿ, "ದೇವಲ ಗಾಣಗಾಪೂರ ಜಿಲ್ಲಾ ಪಂಚಾಯತ್ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷವು ಸ್ಥಳೀಯರಿಗೆ ಆದ್ಯತೆ ನೀಡಿ ಟಿಕೆಟ್ ನೀಡಬೇಕು. ಕ್ಷೇತ್ರದ ಜನರ ಆಶಯಕ್ಕೆ ಮನ್ನಣೆ ನೀಡಬೇಕು. ಒಂದು ವೇಳೆ ಕಾಂಗ್ರೆಸ್ ಹೈಕಮಾಂಡ್ ಯಾರಿಗಾದರೂ ಸ್ಥಳೀಯರಿಗೆ ಟಿಕೆಟ್ ನೀಡದಿದ್ದರೆ, ನಾನು ಬಂಡಾಯ ಅಭ್ಯರ್ಥಿಯಾಗಿ ಚುನಾವಣಾ ಕಣಕ್ಕಿಳಿಯುತ್ತೇನೆ" ಎಂದು ಸ್ಪಷ್ಟ ಎಚ್ಚರಿಕೆ ನೀಡಿದ್ದಾರೆ.

ಮೈಬೂಬ್ ತಾಂಬೋಳಿ ಅವರ ಈ ಹೇಳಿಕೆ ದೇವಲ ಗಾಣಗಾಪೂರ ಜಿಲ್ಲಾ ಪಂಚಾಯತ್ ಕ್ಷೇತ್ರದ ರಾಜಕೀಯ ವಲಯದಲ್ಲಿ ಚರ್ಚೆಗೆ ಕಾರಣವಾಗಿದೆ. ಕಾಂಗ್ರೆಸ್ ಹೈಕಮಾಂಡ್ ಟಿಕೆಟ್ ಹಂಚಿಕೆ ವಿಚಾರದಲ್ಲಿ ಯಾವ ನಿರ್ಧಾರ ಕೈಗೊಳ್ಳಲಿದೆ ಎಂಬುದು ಕುತೂಹಲ ಮೂಡಿಸಿದೆ.

### ತೆಲಂಗಾಣಕ್ಕೆ ಕೃಷ್ಣಾ ನೀರು ಹರಿಸುತ್ತಿರುವುದಕ್ಕೆ ಮಾಜಿ ಶಾಸಕ ಎ.ಎಸ್. ಪಾಟೀಲ್ ನಡಹಳ್ಳಿ ಆಕ್ರೋಶ

# ಮೇ 15 ರೊಳಗೆ ಕೆರೆ ತುಂಬಿಸಲು ಗಡುವು

**ಸತ್ಯಮಿಥ್ಯ ಸುದ್ದಿಮೂಲ ಮುದ್ದೇಬಿಹಾಳ:**
ಉತ್ತರ ಕರ್ನಾಟಕದಲ್ಲಿ ಬರಗಾಲದ ಸಂಕಷ್ಟ ಎದುರಾಗಿರುವ ಈ ಸಂದರ್ಭದಲ್ಲಿ, ಸ್ಥಳೀಯ ರೈತರ ಹಾಗೂ ಗ್ರಾಮೀಣ ಜನರಿಗೆ ಕುಡಿಯುವ ನೀರಿನ ಅಗತ್ಯವನ್ನು ಕಡೆಗಣಿಸಿ ಆಲಮಟ್ಟಿ ಮತ್ತು ನಾರಾಯಣಪುರ ಜಲಾಶಯಗಳಿಂದ ತೆಲಂಗಾಣಕ್ಕೆ ನೀರು ಹರಿಸಲಾಗುತ್ತಿದೆ ಎಂದು ಬಿಜೆಪಿ ರೈತ ಮೋರ್ಚಾ ರಾಜ್ಯ ಅಧ್ಯಕ್ಷ ಹಾಗೂ ಮಾಜಿ ಶಾಸಕರಾದ ಎ.ಎಸ್. ಪಾಟೀಲ್ (ನಡಹಳ್ಳಿ) ಅವರು ರಾಜ್ಯ ಸರ್ಕಾರದ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಅ.11 ರವಿವಾರದಂದು ಪಟ್ಟಣದ ತಮ್ಮ ದಾಸೋಹ ನಿಲಯದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ತೆಲಂಗಾಣಕ್ಕೆ ನೀರು ಹರಿಸುವ ಕುರಿತು ಮುಖ್ಯಮಂತ್ರಿಗಳ ಮೌಖಿಕ ಸೂಚನೆ ನೀಡಲಾಗಿದೆ ಎಂಬ ಆರೋಪ ಮಾಡಿದರು. ನಿತ್ಯ ಸುಮಾರು 5,000 ರಿಂದ 7,000 ಕ್ಯೂಸೆಕ್ ನೀರು ಹರಿಸುತ್ತಿದ್ದು, ಈಗಾಗಲೇ 2 ಟಿಎಂಸಿಗೂ ಅಧಿಕ ನೀರು ಬಿಡುಗಡೆ ಮಾಡಲಾಗಿದೆ. ಒಟ್ಟು 5 ಟಿಎಂಸಿ ನೀರು ಹರಿಸಲು ಸೂಚನೆ ನೀಡಲಾಗಿದೆ ಎಂಬ ಮಾಹಿತಿ ಇದೆ ಎಂದು ಹೇಳಿದರು.

ವಿಜಯಪುರ ಜಿಲ್ಲೆಯ 204 ಕೆರೆಗಳನ್ನು ತುಂಬಿಸಲು ಸುಮಾರು 2 ಟಿಎಂಸಿ ನೀರು ಅಗತ್ಯವಿದ್ದರೂ, ಸ್ಥಳೀಯ ಕೆರೆಗಳಿಗೆ ಸಮರ್ಪಕವಾಗಿ ನೀರು ಒದಗಿಸದೆ ಕೇವಲ ಶೇ.25ರಷ್ಟು ಕೆರೆಗಳನ್ನು ಮಾತ್ರ ತುಂಬಿಸುವ ಕ್ರಮ ಕೈಗೊಳ್ಳಲಾಗಿದೆ. ಆದರೆ, ನೆರೆಯ ರಾಜ್ಯಕ್ಕೆ ಅಲ್ಪಾವಧಿಯಲ್ಲೇ ಹೆಚ್ಚಿನ ಪ್ರಮಾಣದ ನೀರು ಹರಿಸುತ್ತಿರುವುದು ರೈತರಿಗೆ ಮಾಡುತ್ತಿರುವ ಅನ್ಯಾಯ ಎಂದು ಅವರು ದೂರಿದರು.

ಆಲಮಟ್ಟಿ ಜಲಾಶಯದ ಎತ್ತರ ಹೆಚ್ಚಿಸುವ ವಿಚಾರದಲ್ಲಿ ತೆಲಂಗಾಣ ಸೇರಿದಂತೆ ನೆರೆಯ ರಾಜ್ಯಗಳ ವಿರೋಧದಿಂದ ಉತ್ತರ ಕರ್ನಾಟಕದ ನೀರಾವರಿ ಅಭಿವೃದ್ಧಿಗೆ ಹಿನ್ನಡೆಯಾಗಿದೆ. ಇಂತಹ ಪರಿಸ್ಥಿತಿಯಲ್ಲೂ ಸ್ಥಳೀಯರ ಹಿತವನ್ನು ಬದಿಗಿಟ್ಟು ನೀರು ಹರಿಸುವುದರ ಹಿಂದಿನ ಉದ್ದೇಶವೇನು ಎಂದು ಪ್ರಶ್ನಿಸಿದ ಅವರು, ಕಾವೇರಿ ನೀರಿನ ವಿಚಾರದಲ್ಲಿ ತೀವ್ರವಾಗಿ ಪ್ರತಿಕ್ರಿಯಿಸುವ ರಾಜಕಾರಣಿಗಳು ಹಾಗೂ ಮಾಧ್ಯಮಗಳು ಕೃಷ್ಣಾ ನದಿ ನೀರಿನ ವಿಚಾರದಲ್ಲಿ ಮೌನವಾಗಿರುವುದು ಏಕೆ? ಉತ್ತರ ಕರ್ನಾಟಕದ ರೈತರ ಹಿತಾಸಕ್ತಿಗೆ ಧಕ್ಕೆಯಾಗುತ್ತಿದ್ದರೂ ಸ್ಥಳೀಯ ಜನಪ್ರತಿನಿಧಿಗಳು ಧ್ವನಿ ಎತ್ತುತ್ತಿಲ್ಲವೇಕೆ? ಎಂದು ಪ್ರಶ್ನಿಸಿದರು.

ಇದೇ ವೇಳೆ, ನಿಗಮ ಮಂಡಳಿಗೆ ರಾಜೀನಾಮೆ ನೀಡಿದ ಬಳಿಕವೂ ಹಾಲಿ ಶಾಸಕ ನಿಗಮದ ಹಣವನ್ನು ವೈಯಕ್ತಿಕ ಹುಟ್ಟುಹಬ್ಬ ಹಾಗೂ ರಾಜಕೀಯ ಪ್ರಚಾರದ ಜಾಹೀರಾತುಗಳಿಗೆ ಬಳಸಲಾಗುತ್ತಿದೆ ಎಂಬ ಗಂಭೀರ ಆರೋಪವನ್ನೂ ಮಾಜಿ ಶಾಸಕ ನಡಹಳ್ಳಿ ಮಾಡಿದರು. ತಾಲೂಕಿನ ತಾರನಾಳ ಸೇರಿದಂತೆ ಕಾಲುವೆಯ ಕೊನೆ ಭಾಗದ ಗ್ರಾಮಗಳ ಕೆರೆಗಳಿಗೆ ಕುಡಿಯುವ ನೀರು ಒದಗಿಸಲು ಮೇ 15 ರೊಳಗೆ ಕಾಲುವೆ ಮೂಲಕ ನೀರು ಹರಿಸಬೇಕು. ಇಲ್ಲವಾದಲ್ಲಿ ಪಕ್ಷಾತೀತವಾಗಿ ವಿವಿಧ ರಾಜಕೀಯ ಪಕ್ಷಗಳ ಮುಖಂಡರು ಹಾಗೂ ರೈತರನ್ನು ಒಗ್ಗೂಡಿಸಿ ಉಗ್ರ ಹೋರಾಟ ನಡೆಸಲಾಗುವುದು ಎಂದು ನಡಹಳ್ಳಿ ಎಚ್ಚರಿಕೆ ನೀಡಿದರು.

ಕೃಷ್ಣಾ ಭಾಗ್ಯ ಜಲ ನಿಗಮದ ಅಧೀಕ್ಷಕ ಎಂಜಿನಿಯರ್ ಗೋವಿಂದ ರಾಥೋಡ್ ಹಾಗೂ ಕಾರ್ಯನಿರ್ವಾಹಕ ಎಂಜಿನಿಯರ್ ಅಶೋಕ್ ರೆಡ್ಡಿ ಅವರೊಂದಿಗೆ ಈ ಕುರಿತು ಚರ್ಚಿಸಲಾಗಿದ್ದು, ಮೇ 15ರಿಂದ ಕಾಲುವೆಗೆ ನೀರು ಹರಿಸುವುದಾಗಿ ಅಧಿಕಾರಿಗಳು ಭರವಸೆ ನೀಡಿದ್ದಾರೆ ಎಂದು ಅವರು ಹೇಳಿದರು.

ತಾರನಾಳ, ಆಲಕೊಪ್ಪರ, ರೂಡಗಿ, ಕಾಗಲಗುಂಬಾಳ, ಹೂವಿನಹಿಪ್ಪರಗಿ ಹಾಗೂ ದೇವೂರ ಭಾಗದ ಹೂನಳ್ಳಿ, ಅಗಸಬಾಳ ಮತ್ತು ಸಂಕನಾಳ ಸೇರಿದಂತೆ ಕೊನೆ ಭಾಗದ ಕೆರೆಗಳನ್ನು ಸಂಪೂರ್ಣವಾಗಿ ತುಂಬಿಸಬೇಕು. ಮುಖ್ಯ ಕಾಲುವೆ ಮೂಲಕ ಬಿದರಕುಂದಿವರೆಗೂ ಸಮರ್ಪಕವಾಗಿ ನೀರು ತಲುಪಿಸಬೇಕು ಎಂದು ಆಗ್ರಹಿಸಿದರು. ತಾರನಾಳ ಹಾಗೂ ಸುತ್ತಮುತ್ತಲಿನ ನಾಲ್ಕೈದು ಗ್ರಾಮಗಳ ಜನರಿಗೆ ಕೆರೆಗಳೇ ಕುಡಿಯುವ ನೀರಿನ ಪ್ರಮುಖ ಆಧಾರವಾಗಿದ್ದು, ಪ್ರಸ್ತುತ ಜನರು ಮತ್ತು ಜಾನುವಾರುಗಳು ಕುಡಿಯುವ ನೀರಿಗಾಗಿ ಪರದಾಡುವ ಸ್ಥಿತಿ ನಿರ್ಮಾಣವಾಗಿದೆ. ಈ ಕುರಿತು ಜಿಲ್ಲಾಧಿಕಾರಿ ಆನಂದ್ ಅವರೊಂದಿಗೂ ಮಾತನಾಡಿದ್ದು, ಕೊನೆ ಭಾಗದ ಕೆರೆಗಳಿಗೆ ಆದ್ಯತೆ ನೀಡುವಂತೆ ಮನವಿ ಮಾಡಲಾಗಿದೆ ಎಂದರು.

ಉತ್ತರ ಕರ್ನಾಟಕದ ಜಲಸಂಪತ್ತನ್ನು ಸಮರ್ಪಕವಾಗಿ ಬಳಸದೆ ಈ ಭಾಗದ ಜನರನ್ನು ಸಂಕಷ್ಟಕ್ಕೆ ತಳ್ಳುವುದನ್ನು ಸಹಿಸಲು ಸಾಧ್ಯವಿಲ್ಲ. ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಉತ್ತರ ಕರ್ನಾಟಕದ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸಬೇಕು. ತೆಲಂಗಾಣಕ್ಕೆ ನೀರು ಹರಿಸಲಾಗುತ್ತಿದೆ ಎಂಬ ಆರೋಪದ ಕುರಿತು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸ್ಪಷ್ಟನೆ ನೀಡಬೇಕು ಮತ್ತು ಮಾಧ್ಯಮಗಳು ಈ ವಿಷಯವನ್ನು ಗಂಭೀರವಾಗಿ ಕೈಗೆತ್ತಿಕೊಳ್ಳಬೇಕು ಎಂದು ಮಾಜಿ ಶಾಸಕ ನಡಹಳ್ಳಿ ಒತ್ತಾಯಿಸಿದರು.

ಸ್ಥಳೀಯ ರೈತರ ಬೆಳೆಗಳಿಗೆ, ಗ್ರಾಮಗಳ ಕುಡಿಯುವ ನೀರಿನ ಅಗತ್ಯಕ್ಕೆ ಹಾಗೂ ಕೊನೆ ಭಾಗದ ಕೆರೆಗಳ ಭರ್ತಿಗೆ ಆದ್ಯತೆ ನೀಡದಿದ್ದರೆ ಹೋರಾಟ ಅನಿವಾರ್ಯ. ಮೇ 15ರ ಗಡುವಿನೊಳಗೆ ನೀರು ಹರಿಸದಿದ್ದರೆ ಮುಂದಿನ ಹೋರಾಟಕ್ಕೆ ಸರ್ಕಾರವೇ ಹೊಣೆಯಾಗಲಿದೆ ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಮಂಡಲ ಅಧ್ಯಕ್ಷ ಜಗದೀಶ ಪಂಪಣ್ಣವರ, ಬಿಜೆಪಿ ಮುಖಂಡರಾದ ಕೆಂಚಪ್ಪ ಬಿರಾದಾರ, ಪ್ರಭು ಕಡಿ, ಡಾ. ವಿರೇಶ ಪಾಟೀಲ, ಶಂಕರಗೌಡ ಶಿವಣಗಿ, ಎಸ್.ಎಚ್. ಲೊಟಗೇರಿ (ವಕೀಲರು), ಪರಶುರಾಮ ನಾಲತವಾಡ, ಲಕ್ಷ್ಮಣ ಬಿಜೂರ, ಅಶೋಕ ರಾಠೋಡ (ನೆಬಗೇರಿ), ಗುರುನಾಥಗೌಡ ಬಿರಾದಾರ, ಸಿದ್ದರಾಜ ಹೊಳಿ, ಶೇಖರ ಆಲೂರ, ಗೌರಮ್ಮ ಹುನಗುಂದ, ರೇಖಾ ಕೊಂಡಗೂಳಿ, ಸಂಗಮೇಶ ಗುಂಡಕನಾಳ ನಾಗೂರ, ನಾಗೇಶ ಕವಡಿಮಟ್ಟಿ, ವಿರೇಶ ಜಂಗಡಭಾವಿ, ಸೇರಿದಂತೆ ಉಪಸ್ಥಿತರಿದ್ದರು.




## ಮೂಕಜೀವಿಯ ಸಾವಿಗೂ ಮಿಡಿದ ಹೃದಯಗಳು; ಜಕ್ಕಲಿಯಲ್ಲಿ ಮಾನವೀಯತೆಯ ಅಪರೂಪದ ದೃಶ್ಯ!

**ಸತ್ಯಮಿಥ್ಯ ಸುದ್ದಿಮೂಲ ನರೇಗಲ್ಲ :**
ಮನುಷ್ಯರಷ್ಟೇ ಅಲ್ಲ, ಮೂಕಜೀವಿಗಳಿಗೂ ಜೀವವಿದೆ, ನೋವಿದೆ ಎಂಬುದನ್ನು ಅರಿತು ಅವುಗಳ ಬಗ್ಗೆ ಕರುಣೆ ತೋರಬೇಕೆಂಬ ಮಾನವೀಯ ಸಂದೇಶವನ್ನು ಸಮೀಪದ ಜಕ್ಕಲಿ ಗ್ರಾಮದ ಗ್ರಾಮಸ್ಥರು ತಮ್ಮ ನಡೆ ಮೂಲಕ ಸಾರಿದ್ದಾರೆ.

ಗ್ರಾಮದ ಮೆಣಸಿಗಿಯವರ ಓಣಿಯ ಪ್ರಕಾಶ ಜೋಗಿಯವರ ಮನೆಯ ಮುಂದೆ ಗಾಯಗೊಂಡ ಸ್ಥಿತಿಯಲ್ಲಿದ್ದ ಕರೆಮಂಗವೊಂದು ಭಾನುವಾರ ಬೆಳಗ್ಗೆ ಮೃತಪಟ್ಟಿತು. ಮಂಗ ಅನಾರೋಗ್ಯದಿಂದ ಬಳಲುತ್ತಿರುವುದನ್ನು ಗಮನಿಸಿದ ಪ್ರಕಾಶ ಜೋಗಿಯವರು ಶನಿವಾರ ಅದಕ್ಕೆ ನೀರು ಕುಡಿಸಿ, ಆಹಾರ ನೀಡಿ ಆರೈಕೆ ಮಾಡಿದ್ದರು. ಸುದ್ದಿ ತಿಳಿಯುತ್ತಿದ್ದಂತೆಯೇ ಶ್ರೀ ಬಸವೇಶ್ವರ ಭಜನಾ ಮಂಡಳಿ ಹಾಗೂ ನಟ ವಜ್ರಮುನಿ ಅಭಿಮಾನಿ ಬಳಗದವರು ಸ್ಥಳೀಯ ವೈದ್ಯರನ್ನು ಕರೆಸಿ, ಅವರ ಸಲಹೆಯಂತೆ ಮಂಗಕ್ಕೆ ಔಷಧೋಪಚಾರವನ್ನೂ ನೀಡಿದ್ದರು. ಆದರೂ ಅದನ್ನು ಬದುಕಿಸಿಕೊಳ್ಳಲು ಸಾಧ್ಯವಾಗಲಿಲ್ಲ ಎಂಬ ಮಾತು ಕೇಳಿ ಬಂದಿತು.

ಮೂಕಜೀವಿಯ ಸಾವಿನಿಂದ ಮನಮಿಡಿದ ಓಣಿಯ ನಿವಾಸಿಗಳು ಹಾಗೂ ಭಕ್ತರು ಒಂದೆಡೆ ಸೇರಿ, ಮೃತ ಮಂಗಕ್ಕೆ ಭಕ್ತಿಭಾವದಿಂದ ಪೂಜೆ ಸಲ್ಲಿಸಿದರು. ಬಳಿಕ ಡೊಳ್ಳಿನ ವಾದ್ಯಗಳೊಂದಿಗೆ ಮೆರವಣಿಗೆ ನಡೆಸಿ, ಪಟಾಕಿ ಸಿಡಿಸುತ್ತಾ 'ಜೈ ಶ್ರೀರಾಮ್' ಘೋಷಣೆಯೊಂದಿಗೆ ಸಾಗಿದರು. ಅಂತಿಮ ಸಂಸ್ಕಾರದ ವೆಚ್ಚಕ್ಕಾಗಿ ಗ್ರಾಮಸ್ಥರು ಸ್ವಯಂಪ್ರೇರಣೆಯಿಂದ ಕಾಣಿಕೆಯನ್ನೂ ಸಂಗ್ರಹಿಸಿದರು. ನಂತರ ಗ್ರಾಮದ ಶ್ರೀ ಮಾರುತೇಶ್ವರ ದೇವಸ್ಥಾನದ ಮುಂದೆ ಅಂತಿಮ ವಿಧಿವಿಧಾನಗಳನ್ನು ನೆರವೇರಿಸಿ, ಮೃತ ಕರೆಮಂಗವನ್ನು ದಫನ ಮಾಡಲಾಯಿತು. ಮಾತು ಬಾರದ ಜೀವಿಯೊಂದಕ್ಕೂ ಇಷ್ಟೊಂದು ಗೌರವದಿಂದ ಅಂತಿಮ ವಿದಾಯ ಸಲ್ಲಿಸಿದ ಗ್ರಾಮಸ್ಥರ ನಡೆ ಸ್ಥಳೀಯರ ಗಮನ ಸೆಳೆಯಿತು. ಮನುಷ್ಯರ ಸುಖ-ದುಃಖಗಳಲ್ಲಿ ಜೊತೆಯಾಗುವ ಸಮಾಜ, ಪ್ರಕೃತಿಯ ಮಡಿಲಲ್ಲಿ ಬದುಕುವ ಮೂಕಜೀವಿಗಳ ಬಗ್ಗೆಯೂ ಕರುಣೆ ತೋರಬೇಕು ಎಂಬುದನ್ನು ಜಕ್ಕಲಿಯ ಈ ಘಟನೆ ನೆನಪಿಸಿದೆ. ಪ್ರಾಣಿಗಳಿಗೆ ಮಾತು ಬಾರದಿರಬಹುದು; ಆದರೆ ಅವುಗಳಿಗೂ ನೋವು, ಬದುಕುವ ಹಕ್ಕು ಇದೆ ಎಂಬ ಅರಿವು ಪ್ರತಿಯೊಬ್ಬರಲ್ಲೂ ಇರಬೇಕೆಂಬ ಸಂದೇಶವನ್ನು ಗ್ರಾಮಸ್ಥರು ತಮ್ಮ ಕಾರ್ಯದ ಮೂಲಕ ಸಾರಿದ್ದಾರೆ.

ಮೂಕಜೀವಿಯ ಸಾವಿಗೂ ಮಿಡಿದ ಹೃದಯಗಳು, ಜೀವದ ಮೇಲಿನ ಗೌರವಕ್ಕೆ ಸಾಕ್ಷಿಯಾದವು. ಪ್ರೀತಿ ಮತ್ತು ಕರುಣೆಗೆ ಭಾಷೆಯ ಹಂಗಿಲ್ಲ ಎಂಬುದನ್ನು ಜಕ್ಕಲಿ ಗ್ರಾಮಸ್ಥರ ಮಾನವೀಯ ನಡೆ ಮತ್ತೊಮ್ಮೆ ತೋರಿಸಿಕೊಟ್ಟಿದೆ.



## ದಸರಾ ಹಬ್ಬದ ಪ್ರಯುಕ್ತ ಅಕ್ಟೋಬರ್ ತಿಂಗಳ ಪ್ರತಿ ಮಂಗಳವಾರ ಗದಗ ಮೃಗಾಲಯ ವೀಕ್ಷಣೆಗೆ ಅವಕಾಶ

**ಸತ್ಯಮಿಥ್ಯ ಸುದ್ದಿಮೂಲ ಗದಗ:**
ದಸರಾ ಹಬ್ಬದ ಪ್ರಯುಕ್ತ ಶಾಲಾ-ಕಾಲೇಜುಗಳಿಗೆ ರಜೆ ಇರುವ ಹಿನ್ನೆಲೆಯಲ್ಲಿ ಪ್ರವಾಸಿಗರು, ಜನಸಾಮಾನ್ಯರು ಹಾಗೂ ಸ್ಥಳೀಯರಿಗೆ ಅನುಕೂಲವಾಗುವಂತೆ ಅಕ್ಟೋಬರ್-2026ರ ಪ್ರತಿ ಮಂಗಳವಾರದಂದು ಗದಗ ಮೃಗಾಲಯವನ್ನು ಸಾರ್ವಜನಿಕರ ವೀಕ್ಷಣೆಗೆ ತೆರೆಯಲು ನಿರ್ಧರಿಸಿದೆ. ದಸರಾ ಹಬ್ಬದ ರಜೆ ಹಾಗೂ ಪ್ರವಾಸಿಗರ ಅನುಕೂಲವನ್ನು ಗಮನದಲ್ಲಿಟ್ಟುಕೊಂಡು, ಅಕ್ಟೋಬರ್ ತಿಂಗಳ ಪ್ರತಿ ಮಂಗಳವಾರದಂದು ಸಾರ್ವಜನಿಕರು ಮೃಗಾಲಯಕ್ಕೆ ಭೇಟಿ ನೀಡಿ ಪ್ರಾಣಿ-ಪಕ್ಷಿಗಳನ್ನು ವೀಕ್ಷಿಸಲು ಅವಕಾಶ ಕಲ್ಪಿಸಲಾಗಿದೆ.

ಈ ಸೌಲಭ್ಯವನ್ನು ಪ್ರವಾಸಿಗರು, ಸಾರ್ವಜನಿಕರು ಹಾಗೂ ಸ್ಥಳೀಯರು ಸದುಪಯೋಗಪಡಿಸಿಕೊಳ್ಳಬೇಕು ಎಂದು ಗದಗ ಮೃಗಾಲಯದ ಕಾರ್ಯನಿರ್ವಾಹಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸ್ವಸಹಾಯ ಸಂಘಗಳ ಗುಂಪುಗಳ ಸಹಾಯಧನ ಹಿಂಪಡೆದ ಸರ್ಕಾರದ ನಡೆ ಖಂಡನೀಯ: ತಾಳಿಕೋಟಿ

**ಗಜೇಂದ್ರಗಡ:** PMFME ನಲ್ಮ್ ಯೋಜನೆಯಡಿ ಸ್ವಸಹಾಯ ಗುಂಪುಗಳ ಮಹಿಳೆಯರಿಗೆ ಮಂಜೂರು ಮಾಡಬೇಕಾದ ಸಹಾಯಧನವನ್ನು ಸರ್ಕಾರವು ಯಾವುದೇ ಮಾಹಿತಿಯನ್ನು ಪುರಸಭೆಗೆ ತಿಳಿಸದೇ ಹಿಂಪಡೆದಿರುವುದು ನಿಜಕ್ಕೂ ಖಂಡನೀಯ ಎಂದು ವಕೀಲ ದಾವಲಸಾಬ ತಾಳಿಕೋಟಿ ತಿಳಿಸಿದರು.

ಜನವಾದಿ ಮಹಿಳಾ ಸಂಘಟನೆ ನೇತೃತ್ವದಲ್ಲಿ ಪುರಸಭೆ ಮುಭಾಂಗದಲ್ಲಿ ಪ್ರತಿಭಟನೆ ನಡೆಸಿ ಮುಖ್ಯಾಧಿಕಾರಿಗಳ ಮೂಲಕ ಜಿಲ್ಲಾಧಿಕಾರಿಗಳಿಗೆ, ಶಾಸಕರಿಗೆ ಮನವಿ ಸಲ್ಲಿಸಿ ಅವರು ಮಾತನಾಡಿದರು.

ನಲ್ಮ್ ದಿಂದ ಕೆಪ್ಯಾಕ್ ಸಂಸ್ಥೆಗೆ ಸಾಲದ ರೂಪದ ಹಣ ಬಿಡುಗಡೆ ಆಗಿದ್ದು ಯಾವುದೇ ಮಾಹಿತಿಯನ್ನು ಪುರಸಭೆಗೆ ನೀಡದೆ ಹಣವನ್ನು ಹಿಂಪಡೆದಿರುವುದು ಸರಿಯಲ್ಲ. ಕೂಡಲೇ ಅನುದಾನವನ್ನು ಮರುಬಿಡುಗಡೆ ಮಾಡಿ ಮಹಿಳಾ ಫಲಾನುಭವಿಗಳಿಗೆ ಮಂಜೂರು ಮಾಡುವಂತೆ ಒತ್ತಾಯಿಸಿದರು.

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಸಹಭಾಗಿತ್ವದಲ್ಲಿ ಅನುಷ್ಠಾನಗೊಳ್ಳುತ್ತಿರುವ (ಪ್ರಧಾನಮಂತ್ರಿ ಸೂಕ್ಷ್ಮ ಆಹಾರ ಸಂಸ್ಕರಣಾ ಉದ್ದಿಮೆಗಳ ಔಪಚಾರಿಕೀಕರಣ ಯೋಜನೆ) ಅಡಿಯಲ್ಲಿ ಮಹಿಳಾ ಸ್ವಸಹಾಯ ಗುಂಪುಗಳಿಗೆ ಆರ್ಥಿಕ ನೆರವು ಒದಗಿಸುವ ಉದ್ದೇಶದಿಂದ ಇದನ್ನು ಮಂಜೂರು ಮಾಡುವ ಪ್ರಕ್ರಿಯೆ ಕೈಗೊಳ್ಳಲಾಗಿತ್ತು.

ಆದರೆ, ಸಂಬಂಧಪಟ್ಟ ಮಹಿಳಾ ಸ್ವಸಹಾಯ ಗುಂಪುಗಳಿಗೆ ಸದರಿ ಸಹಾಯಧನವನ್ನು ಮಂಜೂರು ಮಾಡಿ ವಿತರಿಸುವ ಪ್ರಕ್ರಿಯೆ ಪೂರ್ಣಗೊಳ್ಳುವ ಮುನ್ನವೇ ಸರ್ಕಾರವು ಯಾವುದೇ ಮುಂಚಿತ ಮಾಹಿತಿ ನೀಡದೆ ಅಥವಾ ಸ್ಪಷ್ಟ ಕಾರಣಗಳನ್ನು ತಿಳಿಸದೆ ಪುರಸಭೆಗೆ ಬಿಡುಗಡೆ ಮಾಡಿದ್ದ ಹಣವನ್ನು ಮರಳಿ ಹಿಂಪಡೆದಿರುವುದು ತಿಳಿದುಬಂದಿದೆ ಎಂದರು.

ಜನವಾದಿ ಮಹಿಳಾ ಸಂಘದ ಮುಖಂಡೆ ಅಕ್ಕಮ್ಮ ರಾಠೋಡ ಮಾತನಾಡಿ ಸರ್ಕಾರದ ಯೋಜನೆಯಡಿ ಸಹಾಯಧನದ ನಿರೀಕ್ಷೆಯಲ್ಲಿದ್ದ ಮಹಿಳಾ ಸ್ವಸಹಾಯ ಗುಂಪುಗಳಿಗೆ ತೀವ್ರ ನಿರಾಸೆಯುಂಟಾಗಿದ್ದು, ತಮ್ಮ ಸಣ್ಣ ಉದ್ಯಮಗಳನ್ನು ಪ್ರಾರಂಭಿಸಲು ಹಾಗೂ ಈಗಾಗಲೇ ಕೈಗೊಂಡಿರುವ ಉದ್ಯಮ ಚಟುವಟಿಕೆಗಳನ್ನು ಮುಂದುವರಿಸಲು ಆರ್ಥಿಕ ತೊಂದರೆ ಎದುರಿಸುವಂತಾಗಿದೆ. ಮಹಿಳೆಯರನ್ನು ಸ್ವಾವಲಂಬಿಗಳನ್ನಾಗಿ ಮಾಡುವುದು, ಅವರ ಆದಾಯವನ್ನು ಹೆಚ್ಚಿಸುವುದು ಮತ್ತು ಸಣ್ಣ ಆಹಾರ ಸಂಸ್ಕರಣಾ ಉದ್ಯಮಗಳಿಗೆ ಪ್ರೋತ್ಸಾಹ ನೀಡುವುದು ಈ ಯೋಜನೆಯ ಪ್ರಮುಖ ಉದ್ದೇಶವಾಗಿರುವುದರಿಂದ, ಅನುದಾನ ಹಿಂಪಡೆಯುವಿಕೆಯಿಂದ ಯೋಜನೆಯ ಉದ್ದೇಶವೇ ಹಿನ್ನಡೆಯಾಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಆದ್ದರಿಂದ, ಮಹಿಳಾ ಸ್ವಸಹಾಯ ಗುಂಪುಗಳ ಹಿತದೃಷ್ಟಿಯಿಂದ ಹಾಗೂ ಮಹಿಳೆಯರ ಆರ್ಥಿಕ ಸ್ವಾವಲಂಬನೆಗೆ ಉತ್ತೇಜನ ನೀಡುವ ಸಲುವಾಗಿ ಈ ಮನವಿಯನ್ನು ತುರ್ತಾಗಿ ಪರಿಗಣಿಸಿ, ಹಿಂಪಡೆಯಲಾದ ಅನುದಾನವನ್ನು ಶೀಘ್ರವಾಗಿ ಮರುಮಂಜೂರು ಮಾಡಿ ಅರ್ಹ ಮಹಿಳಾ ಸ್ವಸಹಾಯ ಗುಂಪುಗಳಿಗೆ ತಲುಪಿಸುವಂತೆ ಸಂಬಂಧಪಟ್ಟ ಇಲಾಖೆಗೆ ಸೂಕ್ತ ನಿರ್ದೇಶನ ನೀಡಬೇಕೆಂದು 15 ದಿನಗಳೊಳಗೆ ಸಹಾಯಧನ ನೀಡದೆ ಇದ್ದರೆ ಪುರಸಭೆ ಮುಂದೆ ಅನಿರ್ದಿಷ್ಟಾವಧಿ ಧರಣಿ ನಡೆಸಲಾಗುವುದು ಎಂದರು.

ಮನವಿ ಸ್ವೀಕರಿಸಿ ಮಾತನಾಡಿದ ಸಮುದಾಯದ ಸಂಘಟನಾಧಿಕಾರಿ ಹನಮಂತಮ್ಮ ನಾಯಕ್ ಈ ಸಮಸ್ಯೆ ಇಡೀ ರಾಜ್ಯಾದ್ಯಂತ ಇರುವುದರಿಂದ ಸಂಬಂಧಿಸಿದ ಇಲಾಖೆಯವರಿಗೆ ಅನೇಕ ಬಾರಿ ಪತ್ರ ಬರೆಯಲಾಗಿದ್ದು ತ್ವರಿತಗತಿಯಲ್ಲಿ ಸಮಸ್ಯೆ ಬಗೆರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು. ಆದ್ದರಿಂದ, ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ, ಮಹಿಳಾ ಸ್ವಸಹಾಯ ಗುಂಪುಗಳಿಗೆ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಕೆಳಕಂಡ ಕ್ರಮಗಳನ್ನು ತುರ್ತಾಗಿ ಕೈಗೊಳ್ಳಬೇಕೆಂದು ಒತ್ತಾಯಿಸಿದರು. ಈ ಪ್ರತಿಭಟನೆಯಲ್ಲಿ ಕಮಲವ್ವ ಮುಧೋಳ, ಚೆನ್ನಮ್ಮ ಗುರಿಕಾರ, ಮಮತ್ತಾಜ ತಾಳಿಕೋಟಿ, ಶಾರಾದ ಕಲ್ಮಶೆಟ್ಟಿ, ರೇಣಕಾ ಕರಡಿ, ಸಾವಿತ್ರಿ ಯೆಂಕಚ್ಚಿ, ಬೀಬಿಜಾನ ಜಂಗ್ಲೀ, ರೇಣುಕಾ ರಾಮಜಿ, ಸುಪ್ರೀತಾ ರಾಮಜಿ, ದ್ರಾಕ್ಷಯಿಣಿ ಬೂದಿಹಾಳ, ದಾವಲಬಿ ನಂದಿಹಾಳ, ಈರಮ್ಮ ಟೆಂಗಿನಕಾಯಿ, ಮಂಜುಳಾ ಚಿಟಗಿ, ನಾಗಮ್ಮ ರಾಮಜಿ, ದಾವಲಬಿ ಅಬ್ಬಿಗೇರಿ ಸೇರಿದಂತೆ ಇತರರು ಪಾಲ್ಗೊಂಡಿದ್ದರು.



## ದೇವಿ ಪುರಾಣದ ಅಮೃತವಾಣಿ ಮನಸ್ಸಿಗೆ ನೆಮ್ಮದಿ, ಬದುಕಿಗೆ ಸನ್ಮಾರ್ಗ!

**ಸತ್ಯಮಿಥ್ಯ ಸುದ್ದಿಮೂಲ ನರೇಗಲ್ಲ :**
ಬದುಕಿನ ಜಂಜಾಟ, ಮನಸ್ಸಿನ ಆತಂಕಗಳ ನಡುವೆ ನೆಮ್ಮದಿಯನ್ನು ಅರಸುವ ಮನುಷ್ಯನಿಗೆ ಧಾರ್ಮಿಕ ಪ್ರವಚನಗಳು ಆತ್ಮಶಾಂತಿಯ ದಾರಿದೀಪವಾಗುತ್ತವೆ. ದೇವಿಯ ಮಹಿಮೆ, ಭಕ್ತಿ ಮತ್ತು ಸತ್ಸಂಗದ ಸಂದೇಶಗಳು ಮನಸ್ಸಿಗೆ ಶಾಂತಿ ನೀಡುವುದರ ಜತೆಗೆ ಬದುಕಿನಲ್ಲಿ ಸನ್ಮಾರ್ಗದಲ್ಲಿ ನಡೆಯಲು ಪ್ರೇರಣೆ ನೀಡುತ್ತವೆ ಎಂದು ಶ್ರೀ ಕಾಳಿಕಾದೇವಿ ಟ್ರಸ್ಟ್ ಕಮಿಟಿಯ ಗೌರವಾಧ್ಯಕ್ಷ ವಿಶ್ವನಾಥ ಬಡಿಗೇರ ಹೇಳಿದರು.

ಪಟ್ಟಣದ ಶ್ರೀ ಕಾಳಿಕಾದೇವಿ ದೇವಸ್ಥಾನದಲ್ಲಿ ನಡೆದ 54ನೇ ಶರನ್ನವರಾತ್ರಿ ಉತ್ಸವವನ್ನು ಉದ್ಘಾಟಿಸಿ ಮಾತನಾಡಿದ ಅವರು, ದೇವಿ ಚರಿತ್ರೆಯು ಪಾಪಾತ್ಮರನ್ನು ಪುಣ್ಯಾತ್ಮರನ್ನಾಗಿ, ದಾನವರನ್ನು ಧನ್ಯರನ್ನಾಗಿ, ವಿದ್ಯಾಹೀನರನ್ನು ವಿದ್ಯಾವಂತರನ್ನಾಗಿ ಹಾಗೂ ನಾಸ್ತಿಕರನ್ನು ಆಸ್ತಿಕರನ್ನಾಗಿ ಮಾಡುವ ಪವಿತ್ರ ಗ್ರಂಥವಾಗಿದೆ. ದೇವಿ ಪುರಾಣದ ಶ್ರವಣದಿಂದ ಮನಸ್ಸಿಗೆ ನೆಮ್ಮದಿ ದೊರೆಯುತ್ತದೆ. ಸತ್ಸಂಗ ಮತ್ತು ವಿವೇಕವು ಮನುಷ್ಯನ ಬದುಕನ್ನು ಬೆಳಗಿಸುವ ನಿರ್ಮಲ ನೇತ್ರಗಳಿದ್ದಂತೆ. ಆದ್ದರಿಂದ ಪ್ರತಿಯೊಬ್ಬರೂ ಧಾರ್ಮಿಕ ಪ್ರವಚನಗಳನ್ನು ಆಲಿಸಿ, ಅವುಗಳಲ್ಲಿನ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ನಾರಾಯಣ ವಡ್ಡಟ್ಟಿ ಮಾತನಾಡಿ, ಮಹಾಕಾಳಿಕಾದೇವಿಯ ಆಶೀರ್ವಾದದಿಂದ ಶರನ್ನವರಾತ್ರಿ ಉತ್ಸವವು ಐದು ದಶಕಗಳಿಗೂ ಮೀರಿದ ಅವಧಿಯಿಂದ ನಿರ್ವಿಘ್ನವಾಗಿ ನಡೆದುಕೊಂಡು ಬರುತ್ತಿದೆ. ಸಮಾಜದ ಜನರ ಭಕ್ತಿಭಾವದ ಜತೆಗೆ ಇತರ ಸಮಾಜಗಳ ಸಹಕಾರವೂ ದೊರೆಯುತ್ತಿರುವುದು ಸಂತಸದ ಸಂಗತಿ. ಪರಸ್ಪರ ಸಹಕಾರ ಮತ್ತು ಒಗ್ಗಟ್ಟಿನಿಂದ ಸಣ್ಣ ಸಮಾಜವೂ ಅಚ್ಚುಕಟ್ಟಾಗಿ ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜಿಸಲು ಸಾಧ್ಯವಾಗಿದೆ ಎಂದರು.

ಉತ್ಸವದ ಅಂಗವಾಗಿ ಮಕ್ಕಳಿಗಾಗಿ ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. ಮಕ್ಕಳು ಆಹ್ವಾನ ಪತ್ರಿಕೆಯಲ್ಲಿ ಪ್ರಕಟಿಸಿರುವ ವಿವರಗಳನ್ನು ಗಮನಿಸಿ ಸ್ಪರ್ಧೆಗಳಲ್ಲಿ ಉತ್ಸಾಹದಿಂದ ಪಾಲ್ಗೊಳ್ಳಬೇಕು. ಪೋಷಕರು ಮಕ್ಕಳನ್ನು ಪ್ರೋತ್ಸಾಹಿಸುವ ಮೂಲಕ ಅವರ ಪ್ರತಿಭೆ ಅನಾವರಣಕ್ಕೆ ಅವಕಾಶ ಕಲ್ಪಿಸಬೇಕು ಎಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಉತ್ಸವ ಸಮಿತಿ ಅಧ್ಯಕ್ಷ ಗಂಗಾಧರ ಬಡಿಗೇರ, ವೀರಣ್ಣ ಕಾತರಕಿ, ಉಮಾಪತಿ ಹೂಳಗೇರಿ, ಶ್ರೀದೇವಿ ಚರಿತಾಮೃತ ಪ್ರವಚನಕಾರ ವೀರಪ್ಪ ಹೂಳಗೇರಿ, ಗ್ರಂಥಪಾಲಕ ಸೂರ್ಯನಾರಾಯಣ ಪತ್ತಾರ, ಮೌನೇಶ ಹೊಸಮನಿ ಸೇರಿದಂತೆ ಗಾಯತ್ರಿ ಮಹಿಳಾ ಮಂಡಳ ಹಾಗೂ ಮೌನೇಶ್ವರ ಯುವಕ ಮಂಡಳದ ಪದಾಧಿಕಾರಿಗಳು ಮತ್ತು ಹೊಸಪೇಟೆ ಓಣಿಯ ಭಕ್ತರು ಉಪಸ್ಥಿತರಿದ್ದರು.

ಗೀತಾ ಬಡಿಗೇರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.



